# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 61

ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಉತ್ತರಿಸಬೇಕಾದ ದಿನಾಂಕ : **15-02-2022**

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಬಹುತೇಕ ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳಲ್ಲಿ ವಿಶಾಖಾ ಮಾರ್ಗದರ್ಶಿ ಸೂತ್ರಗಳ ಅನುಸಾರ ರೂಪಿಸಲಾಗಿರುವ 2013 ಕಾಯ್ದೆ ನಿಬಂಧನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕರ್ನಾಟಕ ರಾಜ್ಯದ ಬಹುತೇಕ ಖಾಸಗಿ ಸಂಸ್ಥೆಗಳಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ), ಅಧಿನಿಯಮ 2013ನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ರಾಜ್ಯದಲ್ಲಿರುವ ಬಹುತೇಕ ಸರ್ಕಾರಿ ಸಂಸ್ಥೆಗಳು ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ), ಅಧಿನಿಯಮ 2013ನ್ನು ಅನುಷ್ಠಾನಗೊಳಿಸಲಾಗಿರುತ್ತದೆ. ಆದರೆ, ಖಾಸಗಿ ವಲಯದಲ್ಲಿ ಬಹುತೇಕ ಖಾಸಗಿ ಸಂಸ್ಥೆಗಳಲ್ಲಿ ಈ ಅಧಿನಿಯಮವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಸಂಬಂಧ ಸರ್ಕಾರಿ/ಖಾಸಗಿ ಸಂಸ್ಥೆಗಳಲ್ಲಿ ಇನ್ನು ಆಂತರಿಕ ದೂರು ಸಮಿತಿಗಳನ್ನು ರಚಿಸದೇ ಇರುವ ಸಂಸ್ಥೆಗಳನ್ನು ಗುರುತಿಸಿ ಕೂಡಲೇ, ಆಂತರಿಕ ದೂರು ಸಮಿತಿಯನ್ನು ರಚಿಸುವಂತೆ ಹಾಗೂ ಸಮಿತಿಯನ್ನು ಮೂರು ವರ್ಷಕ್ಕೊಮ್ಮೆ ರಚಿಸಲು ಹಾಗೂ ಸಂಸ್ಥೆಯ ವಾರ್ಷಿಕ ವರದಿಯಲ್ಲಿ ಸದರಿ ಮಾಹಿತಿಯನ್ನು ಪ್ರಕಟಿಸಲು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮತ್ತು ಇಲಾಖಾ ಮುಖ್ಯಸ್ಥರುಗಳಿಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಂದ ದಿನಾಂಕ:01.01.2022ರಂದು ಪತ್ರವನ್ನು ಬರೆದು ಕೂಡಲೇ ಕ್ರಮಕೈಗೊಳ್ಳುವಂತೆ ತಿಳಿಸಲಾಗಿದೆ. (ಅನುಬಂಧ-1)<br><br>ಈ ಸಂಬಂಧ<br>1. ಸರ್ಕಾರದ ಆದೇಶ ಸಂಖ್ಯೆ:ಮಮಇ/28/ರಾಮಆ/2015, ಬೆಂಗಳೂರು, ದಿ:18.11.2015ರನ್ವಯ ಈ ಅಧಿನಿಯಮದ ಮೇರೆಗೆ ಅಧಿಕಾರಗಳನ್ನು ಚಲಾಯಿಸಲು ಅಥವಾ ಪ್ರಕಾರ್ಯಗಳನ್ನು ನಿರ್ವಹಿಸಲು ಪ್ರತಿಯೊಂದು ಜಿಲ್ಲೆಗೆ ಜಿಲ್ಲಾಧಿಕಾರಿಯನ್ನು ಜಿಲ್ಲಾ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ. (ಅನುಬಂಧ-2)<br>2. ಸರ್ಕಾರದ ಆದೇಶ ಸಂಖ್ಯೆ:ಮಮಇ/28/ರಾಮಆ/2015, ಬೆಂಗಳೂರು, ದಿ:18.11.2015ರನ್ವಯ ಆಂತರಿಕ ದೂರು ಸಮಿತಿ/ಸ್ಥಳೀಯ ದೂರು ಸಮಿತಿಗಳ ಕಾರ್ಯನಿರ್ವಹಣೆ ಮೇಲ್ವಿಚಾರಣೆ ನಡೆಸಲು ರಾಜ್ಯ ಮಟ್ಟದಲ್ಲಿ ಸಕ್ಷಮ ಪ್ರಾಧಿಕಾರವನ್ನು ರಚಿಸಲಾಗಿದೆ. (ಅನುಬಂಧ-3) |

| | | |
|---|---|---|
| | | ಸಂಖ್ಯೆ:ಮಮಇ/28/ರಾಮಅ/2015, ಬೆಂಗಳೂರು, ದಿ:18.11.2015ರನ್ವಯ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ. (ಅನುಬಂಧ-4)<br>4. ಈ ಕಾಯ್ದೆಯನ್ನು ಸಮರ್ಪಕವಾಗಿ ಜಾರಿಗೆ ತರಲು 98 ಇಲಾಖೆಗಳಲ್ಲಿ ನೋಡೆಲ್ ಅಧಿಕಾರಿಗಳನ್ನು ನೇಮಿಸಿರುತ್ತಾರೆ. |
| ಆ) | 2013 ಕಾಯ್ದೆ ನಿಬಂಧನೆಗಳನ್ನು ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳು ಅನುಷ್ಠಾನಗೊಳಿಸುವುದು ಮೇಲುಸ್ತುವಾರಿ ವಹಿಸಬೇಕಾದ ರಾಜ್ಯ ಮಹಿಳಾ ಆಯೋಗದಿಂದ ಒಟ್ಟು ಎಷ್ಟು ಸಂಸ್ಥೆಗಳಿಗೆ ನೋಟಿಸ್ ನೀಡಲಾಗಿದೆ. | ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ), ಅಧಿನಿಯಮ 2013ನ್ನು ಕಾಯ್ದೆ ನಿಬಂಧನೆಗಳನ್ನು ರಾಜ್ಯ ಎಲ್ಲಾ ಸರ್ಕಾರಿ/ಖಾಸಗಿ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸಲು ಕರ್ನಾಟಕ ರಾಜ್ಯ ಮಹಿಳಾ ಆಯೋಗದಿಂದ ಸಂಸ್ಥೆಗಳಿಗೆ ನೋಟಿಸ್‌ಗಳ ಬದಲಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಂದ ಅರೆ ಸರ್ಕಾರಿ ಪತ್ರವನ್ನು ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಹಾಗೂ ಇಲಾಖಾ ಮುಖ್ಯಸ್ಥರುಗಳು ಮತ್ತು ವಿಶೇಷವಾಗಿ ಕಾರ್ಮಿಕ ಇಲಾಖೆಗೆ ಇವರ ಅಧೀನದಲ್ಲಿ ಬರುವ ಖಾಸಗಿ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನ ನೀಡಲು ತಿಳಿಸಲಾಗಿದೆ. |
| ಇ) | ರಾಜ್ಯ ಮಹಿಳಾ ಆಯೋಗದ ನೋಟಿಸ್‌ಗೆ ಒಟ್ಟು ಎಷ್ಟು ಸಂಸ್ಥೆಗಳು ವಿವರಣೆ ಸಲ್ಲಿಸಿವೆ: | ರಾಜ್ಯದ 31 ಜಿಲ್ಲೆಗಳಲ್ಲಿ ಸ್ಥಳೀಯ ದೂರು ಸಮಿತಿಯನ್ನು ರಚಿಸಲಾಗಿದೆ. 389 ಸರ್ಕಾರಿ ಕಛೇರಿಗಳಲ್ಲಿ 1144 ಖಾಸಗಿ ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿ ರಚನೆಯಾಗಿರುವ ಬಗ್ಗೆ ಕರ್ನಾಟಕ ರಾಜ್ಯ ಮಹಿಳಾ ಆಯೋಗಕ್ಕೆ ವರದಿಯಾಗಿರುತ್ತದೆ. |
| ಈ) | ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಮೇರೆಗೆ ರೂಪಿಸಲಾಗಿರುವ ಪಾಶ್ 2013 ಕಾಯಿದೆಯ ನಿಬಂಧನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರದಿಂದ ಕೈಗೊಳ್ಳುತ್ತಿರುವ ಕ್ರಮಗಳೇನು? | ಕರ್ನಾಟಕ ರಾಜ್ಯ ಮಹಿಳಾ ಆಯೋಗದಿಂದ ಕೆಲಸ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ), ಅಧಿನಿಯಮ 2013ರ ಬಗ್ಗೆ ಕಾನೂನು ಅರಿವು ಕಾರ್ಯಕ್ರಮಗಳನ್ನು ಬೆಂಗಳೂರು ವಿಭಾಗ, ಮೈಸೂರು ವಿಭಾಗ, ವಿಜಯಪುರ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಯಿತು. ಅಲ್ಲದೆ ಜಿಲ್ಲಾ, ತಾಲ್ಲೂಕು, ಗ್ರಾಮ ಪಂಚಾಯತ್ ಮಟ್ಟದಲ್ಲಿ ಕಾನೂನು ಅರಿವು ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ.<br><br>ಕರ್ನಾಟಕ ರಾಜ್ಯ ಮಹಿಳಾ ಆಯೋಗದಿಂದ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ), ಅಧಿನಿಯಮ 2013ರ ಕನ್ನಡ ಕೈಪಿಡಿ, ಬ್ರೋಚರ್ಸ್ ಮತ್ತು ಪೋಸ್ಟರ್‌ಗಳನ್ನು ಗ್ರಾಮ ಪಂಚಾಯಿತಿ ಲೈಬ್ರರಿಗಳಿಗೆ ಒದಗಿಸಲು ಪಂಚಾಯತ್ ರಾಜ್ ಇಲಾಖೆಗೆ ಹಸ್ತಾಂತರಿಸಲಾಗಿದೆ. |

ಮಮಇ/6/ರಾಮಅ/2022

Halappa B A

(ಹಾಲಪ್ಪ ಬಸಪ್ಪ ಆಚಾರ್)
ಮಾನ್ಯ ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಅನುಬಂಧ -1

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಕರ್ನಾಟಕ ಸರ್ಕಾರ

ಫ್ಯಾಕ್ಸ್ ಸಂಖ್ಯೆ : 080-22251011
ಕಛೇರಿ ದೂರವಾಣಿ : 080-22353991
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು -560 001
ಇ-ಮೇಲ್ : prlsecy-wc@karnataka.gov.in

ಅ.ಸ.ಪ.ಸಂ:ಮಮಇ/SHW/2021 1143/2 ದಿನಾಂಕ:01-01-2022

ಮಾನ್ಯರೇ,

ವಿಷಯ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಆಂತರಿಕ ದೂರು ಸಮಿತಿ ರಚನೆಯಾಗಿರುವ ಕುರಿತು ಮಾಹಿತಿಯನ್ನು ಒದಗಿಸುವ ಬಗ್ಗೆ.

ಉಲ್ಲೇಖ:
1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ
2. ಸರ್ಕಾರಿ ಆದೇಶ ಸಂಖ್ಯೆ:ಮಮಇ/28/ರಾಮಆ/2015 ಬೆಂಗಳೂರು, ದಿನಾಂಕ:18.11.2015.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ ( Sexual Harassment of Women at Workplace (Prevention, Prohibition and Redressal) Act 2013 ರ ಅಧಿನಿಯಮಕ್ಕೆ ಸಂಬಂಧಿಸಿದಂತೆ, ಉಲ್ಲೇಖ(2)ರಂತೆ ಸರ್ಕಾರದ ಆದೇಶ ಹೊರಡಿಸಲಾಗಿದೆ. ಸದರಿ ಆದೇಶದಂತೆ 10 ಮತ್ತು 10ಕ್ಕಿಂತ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ/ಖಾಸಗಿ ಕಛೇರಿಗಳು, ಕಾರ್ಖಾನೆಗಳು/ಗಾರ್ಮೆಂಟ್ಸ್ ಫ್ಯಾಕ್ಟರಿಗಳು, ವಿಶ್ವವಿದ್ಯಾಲಯಗಳು, ಸಂಘ-ಸಂಸ್ಥೆಗಳು ಇತ್ಯಾದಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ಆದ್ದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಒಳಪಡುವ ತಮ್ಮ ಅಧೀನ ಕಛೇರಿಗಳಲ್ಲಿ ಹಾಗೂ ಖಾಸಗಿ ಕಛೇರಿ/ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವಂತೆ ನಿರ್ದೇಶಿಸಲು ಕೋರಿದೆ. ಆಂತರಿಕ ದೂರು ಸಮಿತಿಯು ರಚನೆಯಾದ ಕಛೇರಿಗಳಲ್ಲಿ ನೊಂದ ಮಹಿಳೆಯರಿಗೆ ಅನುಕೂಲವಾಗುವಂತೆ ಅಧ್ಯಕ್ಷರ ಹೆಸರು, ಪದನಾಮ ಹಾಗೂ ಈ ಬಗ್ಗೆ ವಿಚಾರಿಸಲು ಸಂಬಂಧಪಟ್ಟ ಅಧಿಕಾರಿಯ ದೂರವಾಣಿ ಸಂಖ್ಯೆಯೊಂದಿಗೆ ಫಲಕಗಳನ್ನು ಅಳವಡಿಸಿದ್ದಲ್ಲಿ, ನೊಂದ ಮಹಿಳೆಯರು ಸುಲಭವಾಗಿ ಸಂಪರ್ಕಿಸಬಹುದಾಗಿದೆ.

ಉಲ್ಲೇಖ(1)ರ ಅಧಿನಿಯಮದ ಕಲಂ 5ರಲ್ಲಿ ತಿಳಿಸಿರುವಂತೆ ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕಾಗಿರುತ್ತದೆ. ಆದ್ದರಿಂದ ಈಗಾಗಲೇ ರಚಿಸಲಾಗಿರುವ ಆಂತರಿಕ ದೂರು ಸಮಿತಿಯ ಕಾಲಾವಧಿಯ ಬಗ್ಗೆ ಮರು ಪರಿಶೀಲಿಸಿ, ಸದರಿ ಸಮಿತಿಯನ್ನು ಪುನರ್ ರಚಿಸಬೇಕಾಗಿದ್ದಲ್ಲಿ ಕ್ರಮ ಕೈಗೊಳ್ಳಲು ಕೋರಿದೆ. ಆಂತರಿಕ ದೂರು ಸಮಿತಿಯಲ್ಲಿ ಹಿರಿಯ ಮಹಿಳಾ ಅಧಿಕಾರಿಯನ್ನು ಅಧ್ಯಕ್ಷರನ್ನಾಗಿ ನೇಮಿಸಿ, ಸಮಿತಿಯ ಸದಸ್ಯರುಗಳಲ್ಲಿ ಕಡ್ಡಾಯವಾಗಿ ಎನ್.ಜಿ.ಓ. ಪ್ರತಿನಿಧಿಯನ್ನು ನೇಮಿಸಿಕೊಳ್ಳಬೇಕಾಗಿರುತ್ತದೆ. ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಖಾಸಗಿ ಸಂಸ್ಥೆಗಳ ವಾರ್ಷಿಕ ವರದಿಯಲ್ಲಿ ದೂರು ಸಮಿತಿಯ ಮಾಹಿತಿಯನ್ನು ಪ್ರಕಟಿಸಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)

ಶ್ರೀ. ಗೌರವ್ ಗುಪ್ತಾ, ಭಾ.ಆ.ಸೇ.,
ಆಯುಕ್ತರು,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ಎನ್.ಆರ್.ವೃತ್ತ, ಬೆಂಗಳೂರು.

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಫ್ಯಾಕ್ಸ್ ಸಂಖ್ಯೆ : 080-22251011
ಕಛೇರಿ ದೂರವಾಣಿ : 080-22353991
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು -560 001
ಇ-ಮೇಲ್ : prlsecy-wc@karnataka.gov.in

ಅ.ಸ.ಪ.ಸಂ:ಮಮಇ/SHW/2021 /1143/2

ದಿನಾಂಕ:01-01-2022

ಮಾನ್ಯರೇ,

ವಿಷಯ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಆಂತರಿಕ ದೂರು ಸಮಿತಿ ರಚನೆಯಾಗಿರುವ ಕುರಿತು ಮಾಹಿತಿಯನ್ನು ಒದಗಿಸುವ ಬಗ್ಗೆ.

ಉಲ್ಲೇಖ: 1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ.
2. ಸರ್ಕಾರಿ ಆದೇಶ ಸಂಖ್ಯೆ:ಮಮಇ/28/ರಾಮಆ/2015 ಬೆಂಗಳೂರು, ದಿ:18.11.2015.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು Sexual Harassment of Women at Workplace (Prevention, Prohibition and Redressal) Act 2013 ರ ಅಧಿನಿಯಮಕ್ಕೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ:ಮಮಇ/ರಾಮಆ/2015 ಬೆಂಗಳೂರು, ದಿನಾಂಕ:18.11.2015 ರನ್ವಯ 10 ಮತ್ತು 10ಕ್ಕಿಂತ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ/ಖಾಸಗಿ ಕಛೇರಿಗಳು, ಕಾರ್ಖಾನೆಗಳು/ಗಾರ್ಮೆಂಟ್ಸ್ ಫ್ಯಾಕ್ಟರಿಗಳು, ವಿಶ್ವವಿದ್ಯಾಲಯಗಳು, ಸಂಘ-ಸಂಸ್ಥೆಗಳು ಇತ್ಯಾದಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ತಮ್ಮ ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿ ಮಟ್ಟದಲ್ಲಿ ಬರುವ ಸರ್ಕಾರಿ/ಖಾಸಗಿ ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಆಂತರಿಕ ದೂರು ಸಮಿತಿಯನ್ನು ರಚಿಸಬೇಕಾಗಿರುತ್ತದೆ. ರಚನೆಯಾಗಿದ್ದಲ್ಲಿ, ಆಂತರಿಕ ದೂರು ಸಮಿತಿಯು ರಚನೆಯಾದ ಅಧ್ಯಕ್ಷರ ಹೆಸರು, ಪದನಾಮ ಮತ್ತು ಈ ಬಗ್ಗೆ ವಿಚಾರಿಸಲು ಸಂಬಂಧಪಟ್ಟ ಅಧಿಕಾರಿಯ ದೂರವಾಣಿ ಸಂಖ್ಯೆಯೊಂದಿಗೆ ಫಲಕವನ್ನು ಸ್ಥಳೀಯ ದೂರು ಸಮಿತಿಯ ಕಛೇರಿಯಲ್ಲಿ ಅಳವಡಿಸಿದ್ದಲ್ಲಿ, ನೊಂದ ಮಹಿಳೆಯರು ಸುಲಭವಾಗಿ ಸಂಪರ್ಕಿಸಬಹುದಾಗಿದೆ.

ಉಲ್ಲೇಖ(1)ರ ಅಧಿನಿಯಮದ ಕಲಂ 5ರಲ್ಲಿ ತಿಳಿಸಿರುವಂತೆ ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕಾಗಿರುತ್ತದೆ. ಅದ್ದರಿಂದ ಈಗಾಗಲೇ ರಚಿಸಲಾಗಿರುವ ಆಂತರಿಕ/ಸ್ಥಳೀಯ ದೂರು ಸಮಿತಿಯ ಕಾಲಾವಧಿಯ ಬಗ್ಗೆ ಮರು ಪರಿಶೀಲಿಸಿ, ಸದರಿ ಸಮಿತಿಯನ್ನು ಪುನರ್ ರಚಿಸಬೇಕಾಗಿದ್ದಲ್ಲಿ ಕ್ರಮ ಕೈಗೊಳ್ಳಲು ಕೋರಿದೆ. ಆಂತರಿಕ/ಸ್ಥಳೀಯ ದೂರು ಸಮಿತಿಯಲ್ಲಿ ಹಿರಿಯ ಮಹಿಳಾ ಅಧಿಕಾರಿಯನ್ನು ಅಧ್ಯಕ್ಷರನ್ನಾಗಿ ನೇಮಿಸಿ, ಸಮಿತಿಯ ಸದಸ್ಯರುಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗಗಳಿಗೆ ಸೇರಿದ ಸದಸ್ಯರು ಹಾಗೂ ಕಡ್ಡಾಯವಾಗಿ ಎನ್.ಜಿ.ಓ. ಪ್ರತಿನಿಧಿಯನ್ನು ನೇಮಿಸಿಕೊಳ್ಳಲು ಸೂಚಿಸಿದೆ. ತಮ್ಮ ವ್ಯಾಪ್ತಿಗೆ ಒಳಪಡುವ ಸರ್ಕಾರಿ/ಖಾಸಗಿ ಸಂಸ್ಥೆಗಳ ವಾರ್ಷಿಕ ವರದಿಯಲ್ಲಿ ಆಂತರಿಕ ದೂರು ಸಮಿತಿಯ ವರದಿಯನ್ನು ಪ್ರಕಟಿಸಲು ಕೋರಿದೆ.

ಆದರಗಳೊಂದಿಗೆ,

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)

ಶ್ರೀಮತಿ ವಿ.ವಿ. ಜ್ಯೋತ್ಸ್ನಾ, ಭಾ.ಆ.ಸೇ.,
ಜಿಲ್ಲಾಧಿಕಾರಿಗಳು,
ಜಿಲ್ಲಾಧಿಕಾರಿಗಳವರ ಕಛೇರಿ,
ಕಲಬುರ್ಗಿ ಜಿಲ್ಲೆ.

ಕ.ವ.ವಿ.ಶಾ. /1/2022

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಫ್ಯಾಕ್ಸ್ ಸಂಖ್ಯೆ : 080-22251011
ಕಛೇರಿ ದೂರವಾಣಿ : 080-22353991
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು -560 001
ಇ-ಮೇಲ್ : prlsecy-wc@karnataka.gov.in

ಅ.ಸ.ಪ.ಸಂ:ಮಮಇ/SHW/2021 /1143/2

ದಿನಾಂಕ:01-01-2022

ಮಾನ್ಯರೇ,

ವಿಷಯ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಆಂತರಿಕ ದೂರು ಸಮಿತಿ ರಚನೆಯಾಗಿರುವ ಕುರಿತು ಮಾಹಿತಿಯನ್ನು ಒದಗಿಸುವ ಬಗ್ಗೆ.

ಉಲ್ಲೇಖ: 1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ
2. ಸರ್ಕಾರಿ ಆದೇಶ ಸಂಖ್ಯೆ:ಮಮಇ/28/ರಾಮಅ/2015 ಬೆಂಗಳೂರು, ದಿನಾಂಕ:18.11.2015.

.....

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು Sexual Harassment of Women at Workplace (Prevention, Prohibition and Redressal) Act 2013 ರ ಅಧಿನಿಯಮಕ್ಕೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ:ಮಮಇ/ರಾಮಅ/2015 ಬೆಂಗಳೂರು, ದಿನಾಂಕ:18.11.2015 ರನ್ವಯ 10 ಮತ್ತು 10ಕ್ಕಿಂತ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ/ಖಾಸಗಿ ಕಛೇರಿಗಳು, ಗಾರ್ಮೆಂಟ್ಸ್/ಕಾರ್ಖಾನೆಗಳು ವಿಶ್ವವಿದ್ಯಾಲಯಗಳು, ಸಂಘ-ಸಂಸ್ಥೆಗಳು ಇತ್ಯಾದಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ತಮ್ಮ ಅಧೀನ ಕಛೇರಿಗಳಾದ ತಾಲ್ಲೂಕು ಪಂಚಾಯತಿ, ಪಂಚಾಯತ್ ಇಂಜಿನಿಯರಿಂಗ್ ವಿಭಾಗ, ಗ್ರಾಮ ಪಂಚಾಯತ್ ಹಾಗೂ ಇತರೆ ಸರ್ಕಾರಿ ಕಛೇರಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸಬೇಕಾಗಿರುತ್ತದೆ. ಈಗಾಗಲೇ ರಚನೆಯಾಗಿದ್ದಲ್ಲಿ, ದೂರು ಸಮಿತಿಯ ಅಧ್ಯಕ್ಷರ ಹೆಸರು, ಪದನಾಮ ಮತ್ತು ಈ ಬಗ್ಗೆ ವಿಚಾರಿಸಲು ಸಂಬಂಧಪಟ್ಟ ಅಧಿಕಾರಿಯ ದೂರವಾಣಿ ಸಂಖ್ಯೆಯೊಂದಿಗೆ ಫಲಕವನ್ನು ಸ್ಥಳೀಯ ದೂರು ಸಮಿತಿಯ ಕಛೇರಿಯಲ್ಲಿ ಅಳವಡಿಸಿದ್ದಲ್ಲಿ, ನೊಂದ ಮಹಿಳೆಯರು ಸುಲಭವಾಗಿ ಸಂಪರ್ಕಿಸಬಹುದಾಗಿದೆ.

ಉಲ್ಲೇಖ(1)ರ ಅಧಿನಿಯಮದ ಕಲಂ 5ರಲ್ಲಿ ತಿಳಿಸಿರುವಂತೆ ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕಾಗಿರುತ್ತದೆ. ಅದ್ದರಿಂದ ಈಗಾಗಲೇ ರಚಿಸಲಾಗಿರುವ ಆಂತರಿಕ/ಸ್ಥಳೀಯ ದೂರು ಸಮಿತಿಯ ಕಾಲಾವಧಿಯ ಬಗ್ಗೆ ಮರು ಪರಿಶೀಲಿಸಿ, ಸದರಿ ಸಮಿತಿಯನ್ನು ಪುನರ್ ರಚಿಸಬೇಕಾಗಿದ್ದಲ್ಲಿ ಕ್ರಮ ಕೈಗೊಳ್ಳಲು ಕೋರಿದೆ. ಆಂತರಿಕ ದೂರು ಸಮಿತಿಯಲ್ಲಿ ಹಿರಿಯ ಮಹಿಳಾ ಅಧಿಕಾರಿಯನ್ನು ಅಧ್ಯಕ್ಷರನ್ನಾಗಿ ನೇಮಿಸಿ, ಸಮಿತಿಯ ಸದಸ್ಯರುಗಳಲ್ಲಿ ಕಡ್ಡಾಯವಾಗಿ ಎನ್.ಜಿ.ಓ. ಪ್ರತಿನಿಧಿಯನ್ನು ನೇಮಿಸಿಕೊಳ್ಳಬೇಕಾಗಿರುತ್ತದೆ. ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಖಾಸಗಿ ಸಂಸ್ಥೆಗಳ ವಾರ್ಷಿಕ ವರದಿಯಲ್ಲಿ ದೂರು ಸಮಿತಿಯ ಮಾಹಿತಿಯನ್ನು ಪ್ರಕಟಿಸಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)

ಶ್ರೀಮತಿ ದಿವ್ಯಾಪ್ರಭು ಜಿ.ಆರ್.ಜೆ., ಭಾ.ಆ.ಸೇ.,
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್,
ಮಂಡ್ಯ ಜಿಲ್ಲೆ.

ರವಾನಿಸಿದ 4/1/2022
ದಿನಾಂಕ

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಫ್ಯಾಕ್ಸ್ ಸಂಖ್ಯೆ : 080-22251011
ಕಛೇರಿ ದೂರವಾಣಿ : 080-22353991
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು -560 001
ಇ-ಮೇಲ್ : prlsecy-wc@karnataka.gov.in

ಅ.ಸ.ಪ.ಸಂ:ಮಮಇ/SHW/2021 /1143/2

ದಿನಾಂಕ:01-01-2022

ಮಾನ್ಯರೇ,

ವಿಷಯ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಆಂತರಿಕ ದೂರು ಸಮಿತಿ ರಚನೆಯಾಗಿರುವ ಕುರಿತು ಮಾಹಿತಿಯನ್ನು ಒದಗಿಸುವ ಬಗ್ಗೆ.

ಉಲ್ಲೇಖ:
1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ
2. ಸರ್ಕಾರಿ ಆದೇಶ ಸಂಖ್ಯೆ:ಮಮಇ/28/ರಾಮಆ/2015 ಬೆಂಗಳೂರು, ದಿನಾಂಕ:18.11.2015.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ (Sexual Harassment of Women at Workplace (Prevention, Prohibition and Redressal) Act 2013 ರ ಅಧಿನಿಯಮಕ್ಕೆ ಸಂಬಂಧಿಸಿದಂತೆ, ಉಲ್ಲೇಖ(2)ರಂತೆ ಸರ್ಕಾರದ ಆದೇಶ ಹೊರಡಿಸಲಾಗಿದೆ. ಸದರಿ ಆದೇಶದಂತೆ 10 ಮತ್ತು 10ಕ್ಕಿಂತ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ/ಖಾಸಗಿ ಕಛೇರಿಗಳು, ಕಾರ್ಖಾನೆಗಳು/ಗಾರ್ಮೆಂಟ್ಸ್ ಫ್ಯಾಕ್ಟರಿಗಳು, ವಿಶ್ವವಿದ್ಯಾಲಯಗಳು, ಸಂಘ-ಸಂಸ್ಥೆಗಳು ಇತ್ಯಾದಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ಆದರೆ ಇದುವರೆವಿಗೂ ಖಾಸಗಿ ಕಾರ್ಖಾನೆಗಳು/ಸಂಸ್ಥೆಗಳಲ್ಲಿ 1043 ಆಂತರಿಕ ದೂರು ಸಮಿತಿಯು ರಚನೆಯಾಗಿರುವ ಬಗ್ಗೆ ವರದಿಯಾಗಿರುತ್ತದೆ. ಆದ್ದರಿಂದ ತಮ್ಮ ಇಲಾಖಾ ವ್ಯಾಪ್ತಿಗೆ ಒಳಪಡುವ ಖಾಸಗಿ ಕಾರ್ಖಾನೆಗಳು/ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗಕ್ಕೆ ವರದಿ ಕಳುಹಿಸಲು ನಿರ್ದೇಶಿಸಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)

ಡಾ॥ ಜಿ.ಕಲ್ಪನಾ, ಭಾ.ಆ.ಸೇ.,
ಅಪರ ಮುಖ್ಯ ಕಾರ್ಯದರ್ಶಿಗಳು,
ಕಾರ್ಮಿಕ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

[illegible]

ಅನುಬಂಧ -2

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಜಿಲ್ಲಾ–ಅಧಿಕಾರಿ(District Officer) ನಿಯುಕ್ತಿಗೊಳಿಸುವ ಬಗ್ಗೆ.
ಓದಲಾಗಿದೆ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ, 2013 ಸೆಕ್ಷನ್ 5,20, 21(1)(2).

*****

ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ, 2013 ಸೆಕ್ಷನ್ 5.20, 21(1)(2)ರ ಉದ್ದೇಶಗಳಿಗಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಅಧಿಕಾರಿಯನ್ನು ನೇಮಿಸಿ ಅಧಿಸೂಚಿಸಲು ಕಡ್ಡಾಯಗೊಳಿಸಲಾಗಿದೆ. ಜಿಲ್ಲಾ ಅಧಿಕಾರಿಯು ಸ್ಥಳೀಯ ಸಮಿತಿಯಿಂದ ಸಲ್ಲಿಕೆಯಾಗುವ ವರದಿಗಳು ಸಕಾಲದಲ್ಲಿ ಸಲ್ಲಿಕೆಯಾಗುವಂತೆ ಮೇಲ್ವಿಚಾರಣೆಯನ್ನು ಮಾಡತಕ್ಕದ್ದು ಮತ್ತು ಲೈಂಗಿಕ ಕಿರುಕುಳದ ಮತ್ತು ಮಹಿಳೆಯ ಹಕ್ಕುಗಳ ಬಗ್ಗೆ ಅರಿವನ್ನು ಉಂಟುಮಾಡುವುದಕ್ಕಾಗಿ ಸರ್ಕಾರೇತರ ಸಂಸ್ಥೆಗಳು ತೊಡಗಿಸಿಕೊಳ್ಳುವುದಕ್ಕೆ ಅಗತ್ಯವಾದ ಕ್ರಮಗಳನ್ನು ಕೈಗೊಳ್ಳುವಂತೆ ಮಾಡತಕ್ಕದ್ದು. ಅದರಂತೆ ಜಿಲ್ಲಾ ಅಧಿಕಾರಿಗಳನ್ನು ನೇಮಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಮಮಇ 28 ರಾಮಆ 2015 ಬೆಂಗಳೂರು, ದಿನಾಂಕ:18.11.2015.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ ಈ ಅಧಿಸೂಚನೆಯ ಸೆಕ್ಷನ್ 5ರಲ್ಲಿ ಪ್ರತ್ಯಾಯೋಜಿಸಿದ ಅಧಿಕಾರ ಚಲಾಯಿಸಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಯನ್ನು ಈ ಅಧಿನಿಯಮದ ಮೇರೆಗೆ ಅಧಿಕಾರಗಳನ್ನು ಚಲಾಯಿಸಲು ಅಥವಾ ಪ್ರಕಾರ್ಯಗಳನ್ನು ನಿರ್ವಹಿಸಲು ಪ್ರತಿಯೊಂದು ಜಿಲ್ಲೆಗೆ ಜಿಲ್ಲಾ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

18/11/15
(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ–2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಬೆಂಗಳೂರು
2. ಎಲ್ಲಾ ಪ್ರಧಾನ ಕಾರ್ಯದರ್ಶಿಗಳು ; ಕಾರ್ಯದರ್ಶಿಗಳು
3. ಎಲ್ಲಾ ಇಲಾಖಾ ಮುಖ್ಯಸ್ಥರು
4. ಎಲ್ಲಾ ನಿಗಮ : ಮಂಡಳಿಗಳ ವ್ಯವಸ್ಥಾಪಕ ನಿರ್ದೇಶಕರು
5. 30 ಜಿಲ್ಲೆಗಳ ಎಲ್ಲಾ ಜಿಲ್ಲಾಧಿಕಾರಿಗಳು
6. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
7. ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರೀಕ್ಷಕರು, ಬೆಂಗಳೂರು
8. ಪೊಲೀಸ್ ಆಯುಕ್ತರು, ಬೆಂಗಳೂರು
9. ಎಲ್ಲಾ ಜಿಲ್ಲಾ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ
10. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಕಾವೇರಿ ಭವನ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.

13. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣಾ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
15. ಸರ್ಕಾರದ ಉಪಕಾರ್ಯದರ್ಶಿರವರು, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
17. ಸರ್ಕಾರದ ಅಧೀನ ಕಾರ್ಯದರ್ಶಿ-1, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಶಾಖಾಧಿಕಾರಿ, ಸ್ವೀಮರ ಶಾಖೆ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಶಾಖಾ ರಕ್ಷಾ ಕಡತ/ಒ.ಡಿ.ಜಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ರಚಿಸಿರುವ ಆಂತರಿಕ ದೂರು ಸಮಿತಿ/ಸ್ಥಳೀಯ ದೂರು ಸಮಿತಿಗಳ ಕಾರ್ಯನಿರ್ವಹಣೆ ಮೇಲ್ವಿಚಾರಣೆ ನಡೆಸಲು ರಾಜ್ಯ ಮಟ್ಟದಲ್ಲಿ ಸಕ್ಷಮ ಪ್ರಾಧಿಕಾರದ ಅಧಿಸೂಚನೆ ಹೊರಡಿಸುವ ಬಗ್ಗೆ.

ಉಲ್ಲೇಖ:1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013ರ ಸೆಕ್ಷನ್ 23 ಮತ್ತು 24.

2. ಸರ್ಕಾರಿ ಆದೇಶ ಸಂಖ್ಯೆ:ಮಮಇ/396/ಮಮಅ/2004 ಬೆಂಗಳೂರು ದಿನಾಂಕ:27-9-2004.

******

**ಪ್ರಸ್ತಾವನೆ:**

ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ವಿಚಾರಿಸಲು ಆ.ಸಂ.ಮಮಇ 36 ಮಮಅ 98 ದಿನಾಂಕ: 8-6-2000 ರಂದು ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ರಾಜ್ಯ ಮಟ್ಟದ ಸಮಿತಿಯನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮೂರು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಪುನರ್ ರಚಿಸಿ ಉಲ್ಲೇಖ(2)ರನ್ವಯ ಆದೇಶ ಹೊರಡಿಸಿದೆ.

ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013ರ ಸೆಕ್ಷನ್ 23 ಮತ್ತು 24ರ ಪ್ರಕಾರ ಈ ಅಧಿನಿಯಮವನ್ನು ಅನುಷ್ಠಾನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಮಾಡಲು ಮತ್ತು ಕೆಲಸದ ಸ್ಥಳಗಳಲ್ಲಿನ ಲೈಂಗಿಕ ಕಿರುಕುಳದ ಎಲ್ಲಾ ಪ್ರಕರಣಗಳ ಸಂಬಂಧದಲ್ಲಿ ದಾಖಲಿಸಿದ ಮತ್ತು ವಿಲೇವಾರಿ ಮಾಡಿದ ಪ್ರಕರಣಗಳ ಸಂಖ್ಯೆಯ ಸಂಬಂಧದ ವಿವರಗಳನ್ನು ದಾಖಲಿಸಿ ನಿರ್ವಹಿಸಲು ಸಕ್ಷಮ ಪ್ರಾಧಿಕಾರವನ್ನು ಅಧಿಸೂಚನೆ ಮೂಲಕ ನಿಯುಕ್ತಿಗೊಳಿಸಬೇಕಾಗಿರುತ್ತದೆ. ಈ ಅಧಿನಿಯಮವನ್ನು ಸಾರ್ವಜನಿಕವಾಗಿ ಪ್ರಚಾರ ಮಾಡಲು ಶಿಕ್ಷಣ, ಸಂಪರ್ಕ ಮತ್ತು ತರಬೇತಿ ಸಾಮಗ್ರಿಗಳನ್ನು ಅಭಿವೃದ್ಧಿಪಡಿಸುವುದು, ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಏರ್ಪಡಿಸುವುದು, ಮತ್ತು ದೂರು ಸಮಿತಿಗಳ ಸದಸ್ಯರುಗಳಿಗೆ ಪರಿಚಯ ಮತ್ತು ತರಬೇತಿ ಕಾರ್ಯಕ್ರಮಗಳನ್ನು ಡಿ.ಟಿ.ಐ./ಎ.ಟಿ.ಐ., ಮೈಸೂರು/ನಿಪ್‌ಸಿಡ್, ಯಲಹಂಕ, ಬೆಂಗಳೂರು ಮೂಲಕ ಎಲ್ಲರಿಗೂ ತರಬೇತಿ ಕೊಡಿಸುವುದು ಸಕ್ಷಮ ಪ್ರಾಧಿಕಾರದ ಪ್ರಕಾರ್ಯಗಳಾಗಿರುತ್ತದೆ.

ಆದ್ದರಿಂದ ಸಕ್ಷಮ ಪ್ರಾಧಿಕಾರವನ್ನು ನಿಯುಕ್ತಿಗೊಳಿಸಲು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಮಮಇ 28 ರಾಮಅ 2015 ಬೆಂಗಳೂರು, ದಿನಾಂಕ: 18.11.2015.**

ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013ರ ಸೆಕ್ಷನ್ 23 ಮತ್ತು 24ರ ಅನ್ವಯ ಈ ಅಧಿನಿಯಮವನ್ನು ಅನುಷ್ಠಾನಗೊಳಿಸುತ್ತಿರುವ ಬಗ್ಗೆ ಮೇಲ್ವಿಚಾರಣೆ ಮಾಡಲು ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಸಕ್ಷಮ ಪ್ರಾಧಿಕಾರ ಸಮಿತಿಯನ್ನು ರಚಿಸಿ, ಈ ಆದೇಶ ಹೊರಡಿಸಿದ ದಿನಾಂಕದಿಂದ ಮೂರು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಪುನರ್ ರಚಿಸಿ ಈ ಮುಂದಿನಂತೆ ಆದೇಶ ಹೊರಡಿಸಿದೆ.

## ರಾಜ್ಯ ಮಟ್ಟದ ಸಕ್ಷಮ ಪ್ರಾಧಿಕಾರ ಸಮಿತಿ

| | | | |
|---|---|---|---|
| 1 | ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು | – | ಅಧ್ಯಕ್ಷರು |
| 2 | ಪ್ರಧಾನ ಕಾರ್ಯದರ್ಶಿಗಳು, ಸಿ.ಆ.ಸು.ಇ. | – | ಸದಸ್ಯರು |
| 3 | ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | – | ಸದಸ್ಯರು |
| 4 | ಪ್ರಧಾನ ಕಾರ್ಯದರ್ಶಿಗಳು, ಐ.ಟಿ. & ಬಿ.ಟಿ. ಇಲಾಖೆ | – | ಸದಸ್ಯರು |
| 5 | ಪ್ರಧಾನ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ | – | ಸದಸ್ಯರು |
| 6 | ಕಾರ್ಯದರ್ಶಿಗಳು–2, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ | – | ಸದಸ್ಯರು |
| 7 | ಕಾರ್ಯದರ್ಶಿಗಳು–2, ಒಳಾಡಳಿತ ಇಲಾಖೆ | – | ಸದಸ್ಯರು |
| 8 | ಕಾರ್ಯದರ್ಶಿಗಳು, ಕಾನೂನು ಇಲಾಖೆ | – | ಸದಸ್ಯರು |
| 9 | ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | – | ಸದಸ್ಯರು |
| 10 | ಆಯುಕ್ತರು, ಕಾರ್ಮಿಕ ಇಲಾಖೆ | – | ಸದಸ್ಯರು |
| 11 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ | – | ಸದಸ್ಯರು |
| 12 | ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ | – | ಸದಸ್ಯರು |
| 13 | ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | – | ಸದಸ್ಯರು |
| 14 | ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಪ್ರತಿನಿಧಿ | – | ಸದಸ್ಯರು |
| 15 | ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಹಿಳಾ ಆಯೋಗ | – | ಸದಸ್ಯ ಕಾರ್ಯದರ್ಶಿ |

ಈ ಸಕ್ಷಮ ಪ್ರಾಧಿಕಾರ ಸಮಿತಿಯು ಆಗಿಂದಾಗ್ಗೆ ಸಭೆ ಸೇರಿ ರಾಜ್ಯದಲ್ಲಿ ಕೆಲಸ ಮಾಡುತ್ತಿರುವ ಸ್ಥಳಗಳಲ್ಲಿ ಮಹಿಳೆಯರಿಗೆ ಆಗುತ್ತಿರುವ ತೊಂದರೆಗಳನ್ನು ಪರಿಶೀಲಿಸುವುದು. ಸೆಕ್ಷನ್–8(1,2,3,4)ರನ್ವಯ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾಗುವ ಅನುದಾನದ ವಿನಿಯೋಗದ ಕುರಿತು ಸಹ ಕ್ರಮ ಕೈಗೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಯಲಕ್ಷ್ಮಿ) 18/11/15
ಸರ್ಕಾರದ ಅಧೀನ ಕಾರ್ಯದರ್ಶಿ–2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಪ್ರತಿಗಳು:

1. ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ), (ಇಆರ್‌ಎಸ್‌ಎ), (ಎ & ಇ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 5398, ಕರ್ನಾಟಕ, ಬೆಂಗಳೂರು–01.

2. ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಕಾವೇರಿ ಭವನ, ಬೆಂಗಳೂರು.
6. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
7. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಉಪಕಾರ್ಯದರ್ಶಿರವರು, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ-1, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಶಾಖಾಧಿಕಾರಿ, ಸ್ತ್ರೀಮರ ಶಾಖೆ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ಒ.ಡಿ.ಜಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.

ಅನುಬಂಧ - ೩

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಜಿಲ್ಲಾ ಮಟ್ಟದಲ್ಲಿ ಸ್ಥಳೀಯ ದೂರು ನಿರ್ವಹಣಾ ಸಮಿತಿ ಮತ್ತು ಎಲ್ಲಾ ಕಛೇರಿಗಳಲ್ಲಿ ಆಂತರಿಕ ದೂರು ನಿರ್ವಾಹಣಾ ಸಮಿತಿ ರಚಿಸುವ ಬಗ್ಗೆ.

ಉಲ್ಲೇಖ:1. ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿಗಳ ಸಂ: 666-70:92 ರ ಮೇಲಿನ ದಿ: 13/04/97ರ ತೀರ್ಪು.

2. ಸರ್ಕಾರಿ ಆದೇಶ ಸಂ: ಮಮಇ 36 ಮಮಅ 98, ದಿ: 08/06/2001.
3. ಸರ್ಕಾರದ ಆದೇಶ ಸಂ: ಮಮಇ 58 ಮಮಅ 2002, ಬೆಂಗಳೂರು, ದಿ: 28/08/2002.
4. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ, 2013.

******

ಪ್ರಸ್ತಾವನೆ:

ಉಲ್ಲೇಖ(1)(2) ಮತ್ತು (3)ರನ್ವಯ ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳಗಳನ್ನು ತಡೆಯಲು ದೂರು ನಿರ್ವಹಣಾ ಸಮಿತಿಗಳನ್ನು ರಚಿಸಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ, 2013 ಕೇಂದ್ರ ಸರ್ಕಾರದಿಂದ ಜಾರಿಗೊಳಿಸಲಾಗಿರುತ್ತದೆ. ಈ ಅಧಿನಿಯಮದ ಅನ್ವಯ ಖಾಸಗಿ, ಸರ್ಕಾರಿ, ನಿಗಮ ಮಂಡಳಿ, ಸಾರ್ವಜನಿಕ ಉದ್ಯಮಗಳು, ಫ್ಯಾಕ್ಟರಿಗಳು ಇತ್ಯಾದಿ ಎಲ್ಲಾ ಕಛೇರಿಗಳಲ್ಲಿ ಆಂತರಿಕ ದೂರು ಸಮಿತಿ ರಚಿಸುವುದು, ಜಿಲ್ಲಾ ಮಟ್ಟದಲ್ಲಿ ಸ್ಥಳೀಯ ದೂರು ಸಮಿತಿ ರಚಿಸುವುದು ಸಹ ಕಡ್ಡಾಯಗೊಳಿಸಲಾಗಿರುತ್ತದೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಮಮಇ 28 ರಾಮಅ 2015 ಬೆಂಗಳೂರು, ದಿನಾಂಕ:18.11.2015.**

ಕೆಲಸ ಮಾಡುವ ಸ್ಥಳಗಳಲ್ಲಿ, ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳಗಳನ್ನು ತಡೆಯಲು ದೂರು ನಿರ್ವಾಹಣಾ ಸಮಿತಿಗಳನ್ನು ಈ ಆದೇಶದ ಅನುಬಂಧದಲ್ಲಿನ ಪರಿಷ್ಕೃತ ಮಾರ್ಗಸೂಚಿಗಳಂತೆ ರಚಿಸಿ ಕಾರ್ಯ ನಿರ್ವಹಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

18/11/15
(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಬೆಂಗಳೂರು
2. ಎಲ್ಲಾ ಪ್ರಧಾನ ಕಾರ್ಯದರ್ಶಿಗಳು ; ಕಾರ್ಯದರ್ಶಿಗಳು

3. ಎಲ್ಲಾ ಇಲಾಖಾ ಮುಖ್ಯಸ್ಥರು
4. ಎಲ್ಲಾ ನಿಗಮ : ಮಂಡಳೀಗಳ ವ್ಯವಸ್ಥಾಪಕ ನಿರ್ದೇಶಕರು
5. 30 ಜಿಲ್ಲೆಗಳ ಎಲ್ಲಾ ಜಿಲ್ಲಾಧಿಕಾರಿಗಳು
6. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
7. ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರೀಕ್ಷಕರು, ಬೆಂಗಳೂರು
8. ಪೊಲೀಸ್ ಆಯುಕ್ತರು, ಬೆಂಗಳೂರು
9. ಎಲ್ಲಾ ಜಿಲ್ಲಾ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ
10. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಕಾವೇರಿ ಭವನ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
13. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
15. ಸರ್ಕಾರದ ಉಪಕಾರ್ಯದರ್ಶಿರವರು, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
17. ಸರ್ಕಾರದ ಅಧೀನ ಕಾರ್ಯದರ್ಶಿ-1, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಶಾಖಾಧಿಕಾರಿ, ಸ್ತ್ರೀಮರ ಶಾಖೆ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಶಾಖಾ ರಕ್ಷಾ ಕಡತ/ಒ.ಡಿ.ಜಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.

**ಸರ್ಕಾರದ ಆದೇಶ ಸಂಖ್ಯೆ : ಮಮಇ 28 ರಾಮಅ 2015, ದಿನಾಂಕ: 18.11.2015ಕ್ಕೆ ಅನುಬಂಧ**

ಕೆಲಸ ಮಾಡುವ ಸ್ಥಳಗಳಲ್ಲಿ, ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳಗಳನ್ನು ತಡೆಯಲು ದೂರು ನಿರ್ವಾಹಣಾ ಸಮಿತಿಗಳ ಪರಿಷ್ಕೃತ ಮಾರ್ಗಸೂಚಿಗಳು:-

**ಎಲ್ಲಾ ಕಛೇರಿಗಳಲ್ಲಿ ಆಂತರಿಕ ದೂರು ಸಮಿತಿ ರಚಿಸುವುದು, ಜಿಲ್ಲಾ ಮಟ್ಟದಲ್ಲಿ ಸ್ಥಳೀಯ ದೂರು ಸಮಿತಿ ರಚಿಸುವ ಬಗ್ಗೆ:**

ಲೈಂಗಿಕ ಕಿರುಕುಳದಿಂದ ಭಾದಿತ ಮಹಿಳೆಯು ಆ ಕೃತ್ಯ ನಡೆದ 3 ತಿಂಗಳ ಒಳಗಾಗಿ ಅಥವಾ ಅಂತಹ ಲೈಂಗಿಕ ಕಿರುಕುಳವು ಹಲವಾರು ದಿನಗಳಿಂದ ನಡೆಯುತ್ತಿದ್ದರೆ, ಅಂತಹ ಲೈಂಗಿಕ ಕಿರುಕುಳವು ಕೊನೆಯ ಬಾರಿ ನಡೆದ ದಿನದಿಂದ 3 ತಿಂಗಳ ಒಳಗೆ ಲಿಖಿತವಾಗಿ "ಅಂತರಿಕ ದೂರು ಸಮಿತಿಗೆ" ಅಥವಾ "ಸ್ಥಳೀಯ ದೂರು ಸಮಿತಿಗೆ" ದೂರು ನೀಡಬೇಕು. ಒಂದು ವೇಳೆ ಅಂತಹ ಲೈಂಗಿಕ ಕಿರುಕುಳದಿಂದ ಭಾದಿತ ಮಹಿಳೆಯು 3 ತಿಂಗಳ ಒಳಗೆ ದೂರು ನೀಡಲು ಸಾಧ್ಯವಾಗದಂತಹ ಪರಿಸ್ಥಿತಿ ಎದುರಿಸುತ್ತಿರುವುದಾಗಿ ನಿರೂಪಿಸಿದಲ್ಲಿ ದೂರು ಸಮಿತಿಯು ಹೆಚ್ಚುವರಿ 3 ತಿಂಗಳ ಸಮಯದವರೆಗೂ (ಒಟ್ಟು 6 ತಿಂಗಳು) ದೂರನ್ನು ಸ್ವೀಕರಿಸಬಹುದು.

ಲೈಂಗಿಕ ಕಿರುಕುಳಕ್ಕೆ ಒಳಗಾದ ಮಹಿಳೆ ಅಥವಾ ಅಂತಹ ಮಹಿಳೆಯು ದೂರು ನೀಡದ ರೀತಿಯ ಮಾನಸಿಕ ಮತ್ತು ದೈಹಿಕ ಸ್ಥಿತಿಯಲ್ಲಿದ್ದರೆ ಅಂತಹ ಮಹಿಳೆಯ ಸಮ್ಮತಿ ಪಡೆದ ಯಾವುದಾದರು ವ್ಯಕ್ತಿ ಅಥವಾ ಲೈಂಗಿಕ ಕಿರುಕುಳಕ್ಕೆ ಒಳಗಾದ ಮಹಿಳೆಯು ಸಾವನ್ನಪ್ಪಿದ್ದರೆ, ಅಂತಹ ಮಹಿಳೆಯ ಕಾನೂನುಬದ್ಧ ವಾರಸುದಾರರು ದೂರನ್ನು ನೀಡಬಹುದು.

"ಆಂತರಿಕ ದೂರು ಸಮಿತಿ ಅಥವಾ "ಸ್ಥಳೀಯ ದೂರು ಸಮಿತಿಗೆ ಲೈಂಗಿಕ ಕಿರುಕುಳದ ದೂರನ್ನು ನೀಡಬೇಕು.

**ಆಂತರಿಕ ದೂರು ಸಮಿತಿಯ ಸ್ವರೂಪ ಮತ್ತು ಅದಕ್ಕೆ ಇರುವ ಅಧಿಕಾರಗಳು:**

ಯಾವುದೇ ಒಂದು ಕಛೇರಿ/ಸಂಸ್ಥೆ/ಅಥವಾ ಕೆಲಸದ ಸ್ಥಳಗಳಲ್ಲಿ 10 ಮತ್ತು 10ಕ್ಕಿಂತ ಹೆಚ್ಚು ಮಹಿಳೆಯರು ಕೆಲಸ ಮಾಡುತ್ತಿದ್ದರೆ, ಸಂಸ್ಥೆಯ ಮಾಲೀಕರು/ಮುಖ್ಯಸ್ಥರು, ಆ ಕಛೇರಿ/ಸಂಸ್ಥೆ/ಅಥವಾ ಕೆಲಸದ ಸ್ಥಳಗಳಲ್ಲಿ ಒಂದು "ಆಂತರಿಕ ದೂರು ಸಮಿತಿ" ಯನ್ನು ಕಡ್ಡಾಯವಾಗಿ ರಚನೆ ಮಾಡಬೇಕು. ಆಂತರಿಕ ದೂರು ಸಮಿತಿಯನ್ನು ರಚನೆ ಮಾಡಿದ ನಂತರ ಸಮಿತಿ ರಚನೆ, ಅದರ ಸದಸ್ಯರುಗಳ ಹೆಸರು ಮತ್ತು ವಿಳಾಸವನ್ನು ತಿಳಿಸುವ ಕುರಿತು ಕಛೇರಿಯ ಆದೇಶವನ್ನು ಮತ್ತು ತಿಳುವಳಿಕೆ ಪತ್ರವನ್ನು ಹೊರಡಿಸಬೇಕು. ಈ ವಿಚಾರವನ್ನು ನೌಕರರ ಗಮನಕ್ಕೆ ತರಬೇಕು.

**ಆಂತರಿಕ ದೂರು ಸಮಿತಿಯ ಸ್ವರೂಪ:**

- ಅಧ್ಯಕ್ಷರು: ಕೆಲಸದ ಸ್ಥಳದ, ಕೆಲಸಗಾರರ ಮಧ್ಯದಲ್ಲಿನ ಹಿರಿಯ ಶ್ರೇಣಿಯ ಉದ್ಯೋಗಸ್ಥ ಮಹಿಳೆಯು ಆಂತರಿಕ ದೂರು ಸಮಿತಿಯ ಅಧ್ಯಕ್ಷರಾಗಿರುತ್ತಾರೆ.
- ಸದಸ್ಯರು: ಕೆಲಸಗಾರರ ನಡುವೆ / ಸಮಾಜ ಕಲ್ಯಾಣ ಕ್ಷೇತ್ರಗಳಲ್ಲಿ ಅನುಭವ ಹೊಂದಿರುವ, ಕಾನೂನು ಜ್ಞಾನ ಹೊಂದಿರುವ ಇಬ್ಬರು ಸದಸ್ಯರು ಮತ್ತು ಮಹಿಳೆಯರ ಉನ್ನತಿಗೆ ಕಾರಣರಾದ ಸಂಘಸಂಸ್ಥೆ ಅಥವಾ ಲೈಂಗಿಕ ಕಿರುಕುಳದ ವಿವಾದಕ್ಕೆ ಸಂಬಂಧಿಸಿದ ವಿಚಾರದಲ್ಲಿ ನುರಿತಿರುವ ಅರೆಸರ್ಕಾರಿ ಸಂಸ್ಥೆಯಿಂದ ಒಬ್ಬ ಸದಸ್ಯರನ್ನು ಒಳಗೊಂಡಿರುತ್ತದೆ.
- ಆಂತರಿಕ ಸಮಿತಿಯ ಸದಸ್ಯರ ಶುಲ್ಕಗಳು ಅಥವಾ ಭತ್ಯೆಗಳು: (1)ಸರ್ಕಾರೇತರ ಸಂಸ್ಥೆಗಳ ಪೈಕಿಯಿಂದ ನೇಮಕಗೊಂಡ ಸದಸ್ಯನು, ಆಂತರಿಕ ಸಮಿತಿಯ ವ್ಯವಹರಣೆಗಳನ್ನು ನಡೆಸಿದ್ದಕ್ಕಾಗಿ ದಿನವೊಂದಕ್ಕೆ

ಎರಡು ನೂರು ರೂಪಾಯಿಗಳ ಭತ್ಯೆಯನ್ನು ಪಡೆಯುವುದಕ್ಕೆ ಮತ್ತು ಅವನು ಹವಾನಿಯಂತ್ರಿತ ತ್ರೀ ಟೈಯರ್ ರೈಲಿನಲ್ಲಿ ಅಥವಾ ಹವಾ ನಿಯಂತ್ರಿತ ಬಸ್ಸಿನಲ್ಲಿ ಮತ್ತು ಆಟೋರಿಕ್ಷಾ ಅಥವಾ ಟ್ಯಾಕ್ಸಿ ಮೂಲಕ ಪ್ರಯಾಣಿಸಿದ ಪ್ರಯಾಣ ವೆಚ್ಚವನ್ನು ಅಥವಾ ಅವನು ಪ್ರಯಾಣ ಮಾಡಲು ಖರ್ಚು ಮಾಡಿದ ವಾಸ್ತವಿಕ ಮೊತ್ತ, ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಸಹ ಹಿಂಭರಿಸುವುದಕ್ಕೆ ಹಕ್ಕುಳ್ಳವನಾಗಿರತಕ್ಕದ್ದು.

(2) ನಿಯೋಜಕನು/ಉದ್ಯೋಗದಾತ/ಕಛೇರಿ ಮುಖ್ಯಸ್ಥ ಉಲ್ಲೇಖಿಸಿದ ಭತ್ಯೆಗಳನ್ನು ಸಂದಾಯ ಮಾಡಲು ಹೊಣೆಗಾರನಾಗಿರತಕ್ಕದ್ದು.

**ಆಂತರಿಕ ದೂರು ಸಮಿತಿಯ ಸದಸ್ಯರು 3 ವರ್ಷದವರೆಗೆ ಅಧಿಕಾರದಲ್ಲಿರುತ್ತಾರೆ. ಪ್ರತಿ 3 ವರ್ಷಗಳಿಗೊಮ್ಮೆ** ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕು. ಹಿಂದಿನ ದೂರು ಸಮಿತಿಯಲ್ಲಿ ಪ್ರತಿನಿಧಿಸದಿದ್ದ ಇಲಾಖೆಗಳಿಗೆ ಪ್ರಾತಿನಿಧ್ಯ ಕೊಡುವಂತೆ ಖಚಿತ ಪಡಿಸಿಕೊಳ್ಳತಕ್ಕದ್ದು.

**ಆಂತರಿಕ ದೂರು ಸಮಿತಿಯು ಕಾರ್ಯ ನಿರ್ವಹಣೆ:**

- ಲೈಂಗಿಕ ಕಿರುಕುಳದ ಕುರಿತಾದ ದೂರನ್ನು ಸ್ವೀಕರಿಸಬಹುದಾಗಿದೆ.
- ಲೈಂಗಿಕ ಕಿರುಕುಳದ ಕುರಿತಾದ ದೂರಿನ ಕುರಿತಂತೆ ದೂರುಗಳನ್ನು ದಾಖಲು ಮಾಡಿಕೊಳ್ಳಬಹುದಾಗಿದೆ ಮತ್ತು ಅಂತಹ ದೂರನ್ನು ತೀರ್ಮಾನ ಮಾಡಬಹುದಾಗಿದೆ.
- ಲೈಂಗಿಕ ಕಿರುಕುಳದ ದೂರಿನ ಕುರಿತಂತೆ ದಾಖಲಾತಿಗಳನ್ನು ಕಾಯ್ದುಕೊಳ್ಳಬಹುದಾಗಿದೆ.
- ಆಂತರಿಕ ದೂರು ಸಮಿತಿಯು ಸಾಮಾನ್ಯವಾಗಿ ನ್ಯಾಯ ತೀರ್ಮಾನದ ಕುರಿತಂತೆ ಸಿವಿಲ್ ನ್ಯಾಯಾಲಯಕ್ಕೆ ಇರುವಂತಹ ಎಲ್ಲಾ ಅಧಿಕಾರಗಳನ್ನು ಹೊಂದಿರುತ್ತದೆ. ಅಂದರೇ-
    1. ಸಮನ್ಸ್‌ಗಳನ್ನು ಹೊರಡಿಸುವುದು ಮತ್ತು ಯಾವುದೇ ವ್ಯಕ್ತಿಯ ಹಾಜರಾತಿಗಳನ್ನು ಕಡ್ಡಾಯಗೊಳಿಸಬಹುದಾಗಿದೆ ಮತ್ತು ಅಥವಾ ವ್ಯಕ್ತಿಗಳನ್ನು ಶಪಥದ (ಅಫಿಡವಿಟ್) ಮೇಲೆ ವಿಚಾರಣೆ ಮಾಡಬಹುದಾಗಿದೆ.
    2. ದಾಖಲಾತಿಗಳನ್ನು ಹಾಜರುಪಡಿಸುವುದಕ್ಕೆ ಮತ್ತು ಒದಗಿಸುವುದಕ್ಕೆ ಆದೇಶ ಹೊರಡಿಸಬಹುದಾಗಿದೆ.
    3. ಇನ್ನಿತರ ನಿಗದಿಪಡಿಸಿದ ಕರ್ತವ್ಯಗಳನ್ನು ನಿರ್ವಹಿಸಬಹುದಾಗಿದೆ.

**ಸ್ಥಳೀಯ ದೂರುಗಳ ಸಮಿತಿ ರಚನೆ ಮತ್ತು ಅದಕ್ಕೆ ಇರುವ ಅಧಿಕಾರಗಳು:**

ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ದೂರು ನಿರ್ವಹಣಾ ಸಮಿತಿಗೆ ಸಂಬಂಧಿಸಿದಂತೆ **ಜಿಲ್ಲಾ-ಅಧಿಕಾರಿ (District Officer)** ಎಂದು ನೇಮಿಸಲಾಗಿದೆ. ಪ್ರತಿಯೊಂದು ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಯು ಆಯಾ ಜಿಲ್ಲೆಗೆ ಸಂಬಂಧಿಸಿದಂತೆ "ಸ್ಥಳೀಯ ದೂರುಗಳ ಸಮಿತಿ" ರಚಿಸಬಹುದಾಗಿದೆ. ಯಾವುದಾದರು ಸಂಸ್ಥೆಯಲ್ಲಿ 10ಕ್ಕಿಂತ ಹೆಚ್ಚು ಕೆಲಸಗಾರರು ಹೊಂದಿರದ ಕಾರಣದಿಂದಾಗಿ ಆಂತರಿಕ ದೂರು ಸಮಿತಿಯು ಸ್ಥಾಪನೆಯಾಗದಿದ್ದಲ್ಲಿ ಮತ್ತು ಮಾಲೀಕರ ವಿರುದ್ಧವೇ ದೂರುಗಳನ್ನು ಸ್ವೀಕರಿಸಲು, ಅಸಂಘಟಿತ ಕಾರ್ಮಿಕ ವಲಯದ ದೂರುಗಳನ್ನು (ಉದಾ: ಕಟ್ಟಡ ಕಾರ್ಮಿಕರು, ಮನೆ ಕೆಲಸಗಾರರು) ಸ್ವೀಕರಿಸಲು ಮತ್ತು ವಿಚಾರಣೆ ಮಾಡಲು "ಸ್ಥಳೀಯ ದೂರುಗಳ ಸಮಿತಿ" ರಚಿಸಬೇಕಾಗಿರುತ್ತದೆ.

**"ಸ್ಥಳೀಯ ದೂರುಗಳ ಸಮಿತಿ" ಯ ಸದಸ್ಯರನ್ನು** ಜಿಲ್ಲಾಧಿಕಾರಿಗಳು ನಾಮನಿರ್ದೇಶನ ಮಾಡಬಹುದಾಗಿದೆ. ಈ ಸಮಿತಿಯ ಸ್ವರೂಪ:

ಅಧ್ಯಕ್ಷೆ: ಸಮಾಜ ಕಲ್ಯಾಣ ಕ್ಷೇತ್ರಗಳಲ್ಲಿ, ಸಮರ್ಥರಾದ, ಮತ್ತು ಮಹಿಳೆಯರ ಅಭ್ಯುದಯಕ್ಕೆ ಕಾರಣರಾದ ವ್ಯಕ್ತಿಗಳ ಪೈಕಿ ಒಬ್ಬರು ಮಹಿಳೆಯು ಅಧ್ಯಕ್ಷರಾಗಿರುತ್ತಾರೆ.

ಸದಸ್ಯರು:

- ಒಬ್ಬರು ಸದಸ್ಯರು: ತಾಲ್ಲೂಕು ಮತ್ತು ಜಿಲ್ಲೆಯಲ್ಲಿನ ನಗರ ಸಭೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವವರ ಮಹಿಳೆಯರ ನಡುವೆ ಒಬ್ಬರು ಸದಸ್ಯರಿರುತ್ತಾರೆ.
- ಇಬ್ಬರು ಸದಸ್ಯರು: ಸರ್ಕಾರೇತರ ಸಂಸ್ಥೆಗಳಿಂದ ಅಥವಾ ಮಹಿಳೆಯರ ಅಭ್ಯುದಯಕ್ಕೆ ಕಾರಣವಾದ ಸಂಘಟನೆಗಳನ್ನು ರಚಿಸಿರುವ ಅಥವಾ ಲೈಂಗಿಕ ಕಿರುಕುಳದ ವಿಷಯಕ್ಕೆ ಸಂಬಂಧಿಸಿದಂತೆ ನಿಗದಿಪಡಿಸಬಹುದಾದ ಜ್ಞಾನ ಹೊಂದಿರುವಂತಹ ಇಬ್ಬರು ಸದಸ್ಯರು ಇರುತ್ತಾರೆ.

ಒಟ್ಟಾರೆ ನಾಮ ನಿರ್ದೇಶನಗೊಂಡವರಲ್ಲಿ ಕನಿಷ್ಠಪಕ್ಷ ಒಬ್ಬರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಥವಾ ಇತರೆ ಹಿಂದುಳಿದ ವರ್ಗಗಳ ಅಥವಾ ಕೇಂದ್ರ ಸರ್ಕಾರವು ಕಾಲಕಾಲಕ್ಕೆ ಅಧಿಸೂಚಿಸಲ್ಪಡುವ ಅಲ್ಪಸಂಖ್ಯಾತ ಸಮುದಾಯದವರಾಗಿರಬೇಕು.

**ಸ್ಥಳೀಯ ಸಮಿತಿಯ ಅಧ್ಯಕ್ಷ ಮತ್ತು ಸದಸ್ಯರುಗಳ ಶುಲ್ಕಗಳು ಅಥವಾ ಭತ್ಯೆಗಳು:** (1)ಸ್ಥಳೀಯ ಸಮಿತಿಯ ಅಧ್ಯಕ್ಷನು, ಸದರಿ ಸಮಿತಿಯ ವ್ಯವಹರಣೆಗಳನ್ನು ನಡೆಸಿದ್ದಕ್ಕಾಗಿ ದಿನವೊಂದಕ್ಕೆ ಎರಡು ನೂರ ಐವತ್ತು ರೂಪಾಯಿಗಳ ಭತ್ಯೆಗೆ ಹಕ್ಕುಳ್ಳವನಾಗಿರತಕ್ಕದ್ದು.

(2) ಸರ್ಕಾರೇತರ ಸಂಸ್ಥೆಗಳ ಪೈಕಿಯಿಂದ ನೇಮಕಗೊಂಡ ಸ್ಥಳೀಯ ಸಮಿತಿಯ ಸದಸ್ಯರುಗಳು ಸದರಿ ಸಮಿತಿಯ ವ್ಯವಹರಣೆಗಳನ್ನು ನಡೆಸಿದ್ದಕ್ಕಾಗಿ ದಿನವೊಂದಕ್ಕೆ ಎರಡು ನೂರು ರೂಪಾಯಿಗಳ ಭತ್ಯೆಗೆ ಮತ್ತು ಹವಾನಿಯಂತ್ರಿತ ತ್ರೀ ಟೈಯರ್ ರೈಲಿನಲ್ಲಿ ಅಥವಾ ಹವಾ ನಿಯಂತ್ರಿತ ಬಸ್ಸಿನಲ್ಲಿ ಮತ್ತು ಆಟೋರಿಕ್ಷಾ ಅಥವಾ ಟ್ಯಾಕ್ಸಿ ಮೂಲಕ ಪ್ರಯಾಣಿಸಿದ ಪ್ರಯಾಣ ವೆಚ್ಚವನ್ನು ಅಥವಾ ಅವನು ಪ್ರಯಾಣ ಮಾಡಲು ಖರ್ಚು ಮಾಡಿದ ವಾಸ್ತವಿಕ ಮೊತ್ತ, ಇದರಲ್ಲಿ ಯಾವುದು ಕಡಿಮೆಯೋ ಅದನ್ನು ಸಹ ಹಿಂಭರಿಸುವುದಕ್ಕೆ ಹಕ್ಕುಳ್ಳವನಾಗಿರತಕ್ಕದ್ದು.

(3) ಜಿಲ್ಲಾ ಅಧಿಕಾರಿಯು ಭತ್ಯೆಗಳನ್ನು ಸಂದಾಯ ಮಾಡುವುದಕ್ಕೆ ಹೊಣೆಗಾರನಾಗಿರತಕ್ಕದ್ದು.

**ಸ್ಥಳೀಯ ದೂರುಗಳ ಸಮಿತಿಯ ಸದಸ್ಯರು 3 ವರ್ಷದವರೆಗೆ ಅಧಿಕಾರದಲ್ಲಿರುತ್ತಾರೆ.** ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯ ಪುನರ್ ರಚಿಸಬೇಕು. ಹಿಂದಿನ ದೂರು ಸಮಿತಿಯಲ್ಲಿ ಪ್ರತಿನಿಧಿಸದಿದ್ದ ಇಲಾಖೆಗಳಿಗೆ ಪ್ರಾತಿನಿಧ್ಯ ಕೊಡುವಂತೆ ಖಚಿತ ಪಡಿಸಿಕೊಳ್ಳತಕ್ಕದ್ದು.

**ಸ್ಥಳೀಯ ದೂರು ಸಮಿತಿಯು, ಆಂತರಿಕ ದೂರು ಸಮಿತಿಯ ರೀತಿಯಂತೆ ಅಧಿಕಾರಗಳನ್ನು ಹೊಂದಿರುತ್ತದೆ ಮತ್ತು ಕಾರ್ಯ ನಿರ್ವಹಿಸುತ್ತದೆ.**

**ದೂರುಗಳ ವಿಚಾರಣೆ, ಶಿಫಾರಸ್ಸುಗಳು ಮತ್ತು ಅದರ ಜಾರಿ:**

ದೂರುಗಳ ವಿಚಾರಣೆ, ಶಿಫಾರಸ್ಸುಗಳು ಮತ್ತು ಅದರ ಜಾರಿಗೆ ಸಮಯ ನಿಗದಿಪಡಿಸಲಾಗಿದೆ.

- ದೂರು ಸಲ್ಲಿಸಿದ 7 ಕೆಲಸದ ದಿನಗಳ ಒಳಗೆ ಯಾರ ವಿರುದ್ಧ ದೂರು ನೀಡಲಾಗಿದೆಯೋ ಅಥವಾ ಎದುರುದಾರರಿಗೆ ದೂರಿನ ಒಂದು ಪ್ರತಿಯನ್ನು ತಲುಪಿಸಬೇಕು.
- ಎದುರುದಾರರು ದೂರು ಪ್ರತಿ ಪಡೆದ 10 ಕೆಲಸದ ದಿನಗಳ ಒಳಗೆ ದೂರಿಗೆ ಪ್ರತ್ಯುತ್ತರವನ್ನು, ಅದಕ್ಕೆ ಅವಶ್ಯಕವಾದ ದಾಖಲಾತಿಗಳು ಮತ್ತು ಸಾಕ್ಷಿದಾರರ ಹೆಸರು ವಿಳಾಸದೊಂದಿಗೆ ಸಮಿತಿಗೆ ಸಲ್ಲಿಸಬೇಕು.
- ಲೈಂಗಿಕ ಕಿರುಕುಳ ನಡೆದಿದೆ ಎಂದು ನಂಬಲರ್ಹ ಬಲವಾದ ಸಾಕ್ಷಿಗಳು ಮತ್ತು ಆರೋಪವು ಮೇಲ್ನೋಟಕ್ಕೆ ಸಾಬೀತು ಆಗುವಂತಿದ್ದರೆ, ಅಂತಹ ಪ್ರಕರಣದ ದೂರನ್ನು ದೂರು ದಾಖಲಾದ 7 ದಿನಗಳ ಒಳಗೆ ಸ್ಥಳೀಯ ಪೊಲೀಸ್ ಠಾಣೆಗೆ **ಭಾರತೀಯ ದಂಡ ಸಂಹಿತೆಯ ಕಲಂ 509, 354(ಎ)** ಪ್ರಕಾರ ಅಥವಾ ಇನ್ನಿತರ ಕಲಂಗಳ ಅನ್ವಯ ಅಗತ್ಯ ತೀರ್ಮಾನಗಳನ್ನು ತೆಗೆದುಕೊಳ್ಳಲು ದೂರನ್ನು ವರ್ಗಾಯಿಸಬೇಕಾಗಿರುತ್ತದೆ.
- ದೂರು ಸಮಿತಿಯು 'ನೈಸರ್ಗಿಕ ನ್ಯಾಯತತ್ವದಂತೆ' (ಅಂದರೆ ದೂರುದಾರರು ಮತ್ತು ಎದುರುದಾರರಿಗೆ ತಮ್ಮ ವಿಚಾರಗಳನ್ನು ಹೇಳಿಕೊಳ್ಳಲು ಅವಶ್ಯಕವಾದ ಸಮಾನವಾದ ಅವಕಾಶ ನೀಡಿ) ವಿಚಾರಣೆ ಮಾಡಬೇಕು.
- ದೂರು ಸಲ್ಲಿಸಿದ 90 ದಿನಗಳ ಒಳಗೆ ದೂರಿನ ವಿಚಾರಣೆ ಮತ್ತು ತೀರ್ಮಾನ ಮಾಡಿ ನಂತರ ವರದಿಯನ್ನು ಉದ್ಯೋಗದಾತರಿಗೆ ಅಥವಾ ಮಾಲೀಕರಿಗೆ ನೀಡಬೇಕು.

- ದೂರುದಾರರು ಅಥವಾ ಎದುರುದಾರರು ನಂಬಲರ್ಹವಾದ ಯಾವುದೇ ಕಾರಣಗಳಿಲ್ಲದೆ ಸಮಿತಿಯ 3 ನಿಯಮಿತವಾದ ವಿಚಾರಣೆ ಕಾರ್ಯಕ್ಕೆ ಗೈರು ಹಾಜರಾಗಿದ್ದರೆ, ಅಂತಹ ಸಂದರ್ಭದಲ್ಲಿ ಸಮಿತಿಯು 15 ದಿನಗಳಿಗೆ ಕಡಿಮೆ ಇರದಂತೆ ಸಂಬಂಧಿಸಿದ ವ್ಯಕ್ತಿಗಳಿಗೆ ನೋಟಿಸ್ ನೀಡಿ "ಏಕಪಕ್ಷೀಯ" ತೀರ್ಮಾನವನ್ನು ನೀಡಬಹುದಾಗಿದೆ.
- ಸಮಿತಿಯ ಮುಂದೆ ವಿಚಾರಣೆಯ ಸಂದರ್ಭದಲ್ಲಿ ಪಕ್ಷಗಾರರು ಯಾವುದೇ ರೀತಿಯ ವಕೀಲರನ್ನು ನೇಮಿಸಿಕೊಳ್ಳುವಂತಿಲ್ಲ.
- ಸಮಿತಿಯ ವಿಚಾರಣೆಯ ಸಂದರ್ಭದಲ್ಲಿ ಕನಿಷ್ಠ ಪಕ್ಷ 3 ಸದಸ್ಯರು ಕಡ್ಡಾಯವಾಗಿ ಹಾಜರಿರಬೇಕು.
- ಮಾಲೀಕರು ಅಥವಾ ಉದ್ಯೋಗದಾತರು 60 ದಿನಗಳ ಒಳಗೆ ವರದಿಯ ಅನ್ವಯ ಅವಶ್ಯಕ ಕ್ರಮ ಕೈಗೊಳ್ಳಬೇಕು.

**ದೂರುಗಳ ವಿಚಾರಣೆ ವಿಧಾನಗಳು ಮತ್ತು ಸಮಿತಿಯು ತೆಗೆದುಕೊಳ್ಳಬಹುದಾದ ಕ್ರಮಗಳು:**

ಸಮಿತಿಯ ಮುಂದೆ ದೂರು ಬಂದಾಗ,

- **ದೂರು ದಾಖಲಿಸಿಕೊಳ್ಳಬೇಕು:** ಸಮಿತಿಯು ದೂರನ್ನು ದಾಖಲಿಸಿಕೊಳ್ಳಬೇಕು. ದೂರಿನ 6 ಪ್ರತಿಗಳನ್ನು ಮತ್ತು ಅದಕ್ಕೆ ಅವಶ್ಯಕವಾದ ದಾಖಲಾತಿಗಳು ಮತ್ತು ಸಾಕ್ಷಿಗಳ ಹೆಸರು ಮತ್ತು ವಿಳಾಸವನ್ನು ದೂರುದಾರರು ನೀಡಬೇಕು.

- **ವಿಚಾರಣೆ ಮಾಡಬೇಕು:** ಸಮಿತಿಯು ದೂರನ್ನು ದಾಖಲಿಸಿಕೊಳ್ಳಬೇಕು ಮತ್ತು ದೂರಿನಲ್ಲಿ ಹೆಸರಿಸಲ್ಪಟ್ಟ ಎದುರುದಾರರಿಗೆ **ದೂರಿನ ಒಂದು ಪ್ರತಿಯನ್ನು ದೂರು ಸ್ವೀಕರಿಸಿದ 7 ಕೆಲಸದ ದಿನಗಳ ಒಳಗೆ ಕಳುಹಿಸಬೇಕು. ಎದುರುದಾರರು <u>ದೂರನ್ನು</u> ಸ್ವೀಕರಿಸಿದ 10 ಕೆಲಸದ ದಿನಗಳ ಒಳಗೆ** ತಮ್ಮ ಪ್ರತ್ಯುತ್ತರದೊಡನೆ ಅವಶ್ಯಕವಾದ ದಾಖಲಾತಿಗಳು ಮತ್ತು ಸಾಕ್ಷಿಗಳ ಹೆಸರು ಮತ್ತು ವಿಳಾಸ ಸಮಿತಿಗೆ ನೀಡಬೇಕು.
- ದೂರುದಾರರಿಗೆ ಅವಶ್ಯಕವಾದ ರಕ್ಷಣೆ ಮತ್ತು ಸಹಾಯ ನೀಡಬೇಕು.
- ದೂರು ಮೇಲ್ನೋಟಕ್ಕೆ ಸಾಬೀತಾದಲ್ಲಿ ವಿಚಾರಣೆಗೆ ತೆಗೆದುಕೊಳ್ಳಬೇಕು ಮತ್ತು ಅಸಂಘಟಿತ ಕಾರ್ಮಿಕ ವಲಯದ ದೂರುಗಳಿಗೆ ಸಂಬಂಧಿಸಿದಂತೆ ಅವಶ್ಯಕವೆನಿಸಿದಲ್ಲಿ 7 ದಿನಗಳ ಒಳಗೆ ಪೊಲೀಸರಿಗೆ ದೂರು ವರ್ಗಾವಣೆ ಮಾಡಬೇಕು.
- ವಿಚಾರಣೆಯು ಪೂರ್ಣಗೊಂಡ 10 ದಿನಗಳ ಒಳಗೆ ವರದಿ ಮತ್ತು ಶಿಫಾರಸ್ಸುಗಳನ್ನು ಮಾಲೀಕರಿಗೆ ಅಥವಾ ಜಿಲ್ಲಾ-ಅಧಿಕಾರಿ(District Officer)ಗಳಿಗೆ ನೀಡಬೇಕು.
- ಬಾಧಿತ ಮಹಿಳೆಗೆ ಕಾನೂನು ಬದ್ಧವಾಗಿ ದೊರೆಯುವ ರಜೆಗಳ ಜೊತೆಯಲ್ಲಿ ಅವಶ್ಯಕತೆಗಳಿಗೆ ಅನುಗುಣವಾಗಿ ರಜೆಗಳನ್ನು ಹೆಚ್ಚುವರಿಯಾಗಿ ನೀಡಬಹುದಾಗಿದೆ.
- ವಿಚಾರಣೆಯ ಸಂದರ್ಭದಲ್ಲಿ ದೂರುದಾರರ ಮನವಿ ಮೇರೆಗೆ ದೂರುದಾರರನ್ನು ಅವರ ರಕ್ಷಣೆಗಾಗಿ ಅಥವಾ ಎದುರುದಾರರನ್ನು ವರ್ಗಾವಣೆ ಮಾಡಬಹುದಾಗಿದೆ.

ಸಮಿತಿಯು ಲೈಂಗಿಕ ಕಿರುಕುಳದ ಆಪಾದನೆಯು ಸಾಬೀತಾಗಿದೆ ಎಂದು ನಿರ್ಣಯಿಸಿದಲ್ಲಿ ಕೈಗೊಳ್ಳಬಹುದಾದ ಕ್ರಮಗಳು:

- ತಪ್ಪಿತಸ್ಥರಿಗೆ ಸೂಚನೆ ಅಥವಾ ಎಚ್ಚರಿಕೆ ನೀಡುವುದು,
- ತಪ್ಪಿತಸ್ಥರಿಗೆ ದಂಡ ವಿಧಿಸುವುದು,
- ತಪ್ಪಿತಸ್ಥರನ್ನು ವರ್ಗಾವಣೆ ಮಾಡುವುದು,
- ತಪ್ಪಿತಸ್ಥರನ್ನು ವಜಾಗೊಳಿಸುವಂತೆ ಶಿಫಾರಸ್ಸು ಮಾಡುವುದು,

- ತಪ್ಪಿತಸ್ಥರ ಪದೋನ್ನತಿ ಅಥವಾ ಸಂಬಳ ಹೆಚ್ಚಳವನ್ನು ತಡೆಹಿಡಿಯುವುದು,
- ಅನ್ವಯಿಸುವ ಸೇವಾ ನಿಯಮಗಳ ಅನ್ವಯ ನಿಗದಿಪಡಿಸಿದ ರೀತಿಯಲ್ಲಿ ಸೇವಾ ದುರ್ನಡತೆಯೆಂದು ಭಾವಿಸಿ ಅಗತ್ಯ ಕ್ರಮ ಜರುಗಿಸಬಹುದು.
- ಬಾಧಿತ ಮಹಿಳೆಗೆ ಅಥವಾ ಅವಳ ವಾರಸುದಾರರಿಗೆ ಮಾನಸಿಕ ಆಘಾತ, ನೋವು, ಘಟನೆಯ ಪರಿಣಾಮದಿಂದಾಗಿ ಭವಿಷ್ಯದ ಜೀವನೋಪಾಯದಿಂದ ವಂಚಿತರಾದ ಕಾರಣಕ್ಕಾಗಿ, ದೈಹಿಕ ಮತ್ತು ಮಾನಸಿಕ ಯಾತನೆಗೆ ಭರಿಸಿದ ವೈದ್ಯಕೀಯ ವೆಚ್ಚವನ್ನು ತಪ್ಪಿತಸ್ಥರ ಆದಾಯ ಮತ್ತು ಆರ್ಥಿಕ ಸಾಮರ್ಥ್ಯಕ್ಕೆ ಅನುಗುಣವಾಗಿ ಬಾಧಿತ ಮಹಿಳೆಗೆ ಅಥವಾ ವಾರಸುದಾರರಿಗೆ ನೀಡುವಂತೆ ತೀರ್ಮಾನ ಮಾಡಬಹುದಾಗಿದೆ.

**ಲೈಂಗಿಕ ಕಿರುಕುಳದ ಆಪಾದನೆಯು ಸುಳ್ಳು ಎಂದು ನಿರ್ಣಯಿಸಿದಲ್ಲಿ ಕೈಗೊಳ್ಳಬಹುದಾದ ಕ್ರಮಗಳು:**

- ತಪ್ಪಿತಸ್ಥರಿಗೆ ಸೂಚನೆ ಅಥವಾ ಎಚ್ಚರಿಕೆ ನೀಡುವುದು,
- ತಪ್ಪಿತಸ್ಥರಿಗೆ ದಂಡ ವಿಧಿಸುವುದು,
- ತಪ್ಪಿತಸ್ಥರನ್ನು ವರ್ಗಾವಣೆ ಮಾಡುವುದು,
- ತಪ್ಪಿತಸ್ಥರನ್ನು ವಜಾಗೊಳಿಸುವಂತೆ ಶಿಫಾರಸ್ಸು ಮಾಡುವುದು,
- ತಪ್ಪಿತಸ್ಥರ ಪದೋನ್ನತಿ ಅಥವಾ ಸಂಬಳ ಹೆಚ್ಚಳವನ್ನು ತಡೆ ಹಿಡಿಯುವುದು,
- ತಪ್ಪಿತಸ್ಥರಿಗೆ ಅನ್ವಯಿಸುವ ಸೇವಾ ನಿಯಮಗಳ ಅನ್ವಯ ನಿಗದಿಪಡಿಸಿದ ರೀತಿಯಲ್ಲಿ ಸೇವಾ ದುರ್ನಡತೆಯೆಂದು ಭಾವಿಸಿ ಅಗತ್ಯ ಕ್ರಮ ಜರುಗಿಸಬಹುದು.

○ ಸಮಿತಿಯು ದೂರಿನನ್ವಯ ಅಗತ್ಯ ಕ್ರಮ ಕೈಗೊಳ್ಳುವಂತೆ ಉದ್ಯೋಗದಾತರಿಗೆ ಶಿಫಾರಸ್ಸು ಮಾಡಬಹುದಾಗಿದೆ.
○ ಸಮಿತಿಯ ಶಿಫಾರಸ್ಸುಗಳನ್ನು ಮಾಲೀಕರು ಜಾರಿಗೊಳಿಸಲೇಬೇಕು.

**ಉದ್ಯೋಗದಾತರು ಅಥವಾ ಮಾಲೀಕರ ಕರ್ತವ್ಯಗಳು:**

- ಕೆಲಸದ ಸ್ಥಳಗಳಲ್ಲಿ ಲೈಂಗಿಕ ಕಿರುಕುಳವನ್ನು ನಿಷೇಧಿಸಲಾಗಿದೆ ಎಂಬ ಬಗ್ಗೆ ಪ್ರಕಟಣೆಯನ್ನು ಸುತ್ತೋಲೆಯ ಮೂಲಕ ಹೊರಡಿಸಬೇಕು ಮತ್ತು ಉದ್ಯೋಗಿಗಳಿಗೆ ಈ ಕುರಿತು ಮಾಹಿತಿ ನೀಡಬೇಕು.
- ಕೆಲಸದ ಸ್ಥಳಗಳಲ್ಲಿ ಲೈಂಗಿಕ ಕಿರುಕುಳ ಮುಕ್ತವಾದ ವಾತಾವರಣವನ್ನು ನಿರ್ಮಾಣ ಮಾಡಬೇಕು.
- ಆಂತರಿಕ ದೂರು ಸಮಿತಿಯನ್ನು ರಚಿಸುವುದು.
- ಆಂತರಿಕ ದೂರು ಸಮಿತಿಯ ಸದಸ್ಯರು, ಸದಸ್ಯರ ವಿಳಾಸ, ಸಮಿತಿಯು ಕಾರ್ಯನಿರ್ವಹಿಸುವ ಸ್ಥಳ ಮತ್ತು ಸಮಯದ ಕುರಿತು ಕೆಲಸಗಾರರಿಗೆ ಮಾಹಿತಿ ನೀಡಬೇಕು.
- ದೂರುದಾರರಿಗೆ, ದೂರಿನ ವಿಚಾರಣೆಯ ಸಂದರ್ಭದಲ್ಲಿ ಯಾವುದೇ ಕಿರುಕುಳ ಅಥವಾ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು.
- ದೂರು ಸಮಿತಿಯು ಆದೇಶಿಸಿದಂತೆ ರಕ್ಷಣೆ ನೀಡುವುದು ಮತ್ತು ಅಗತ್ಯ ಸಹಾಯ (ವೈದ್ಯಕೀಯ, ಕಾನೂನು ಇನ್ನಿತರ ಸಹಾಯ) ಮಾಡುವುದು.
- ದೂರು ಸಮಿತಿಯು ನೀಡಿದಂತಹ ಶಿಫಾರಸ್ಸುಗಳನ್ನು ಜಾರಿ ಮಾಡಬೇಕು.
- ಆಂತರಿಕ ದೂರು ಸಮಿತಿಯು ವಾರ್ಷಿಕ ವರದಿಯನ್ನು ಮಾಲೀಕರಿಗೆ ಮತ್ತು ಸ್ಥಳೀಯ ಸಮಿತಿಯು ಜಿಲ್ಲಾ–ಅಧಿಕಾರಿ(District Officer) ಸಲ್ಲಿಸಬೇಕು. ಈ ವರದಿಯನ್ನು ಮಾಲೀಕರು ತನ್ನ ಸಂಸ್ಥೆಯ ವಾರ್ಷಿಕ ವರದಿಯಲ್ಲಿ ಸೇರಿಸತಕ್ಕದ್ದು.

ಮಾಲೀಕರು ಅಥವಾ ಉದ್ಯೋಗದಾತರು ಮೇಲ್ಕಂಡ ಕರ್ತವ್ಯಗಳನ್ನು ನಿರ್ವಹಿಸಲು ತಪ್ಪಿದ್ದಲ್ಲಿ 50,000/-ಗಳವರೆಗೆ ದಂಡ ನೀಡಬೇಕಾಗುತ್ತದೆ ಮತ್ತು ಇಂತಹ ಕಾರ್ಯಗಳು ಪುನರಾವರ್ತನೆಯಾದಲ್ಲಿ ಪ್ರತಿಬಾರಿಯ ಕರ್ತವ್ಯ ಉಲ್ಲಂಘನೆಗಾಗಿ ದಂಡದ ಹಣದ ಎರಡರಷ್ಟು ದಂಡ ನೀಡಬೇಕಾಗುತ್ತದೆ.

ದೂರು ಸಮಿತಿಯ ಶಿಫಾರಸ್ಸಿನ ವಿರುದ್ಧ ಮೇಲ್ಮನವಿ ಸಲ್ಲಿಸುವ ವಿಧಾನ:

ದೂರು ಸಮಿತಿಯು ನೀಡಿದ ಶಿಫಾರಸ್ಸುಗಳಿಂದ ಬಾಧಿತರಾದವರು ಸೇವಾ ನಿಯಮಗಳ ಅನ್ವಯ ಅಸ್ತಿತ್ವದಲ್ಲಿರುವ ನ್ಯಾಯಾಲಯಕ್ಕೆ ಅಥವಾ ನ್ಯಾಯ ಮಂಡಳಿಗೆ ಸಮಿತಿಯು ಶಿಫಾರಸ್ಸು ನೀಡಿದ 90 ದಿನಗಳ ಒಳಗೆ ಮೇಲ್ಮನವಿ ದಾಖಲು ಮಾಡಬಹುದು.

**ರಾಜಿ ಸಂಧಾನ:** (1) ಆಂತರಿಕ ಸಮಿತಿ ಅಥವಾ ಸಂದರ್ಭಾನುಸಾರ ಸ್ಥಳೀಯ ಸಮಿತಿಯು ಸೆಕ್ಷನ್ 11ರ ಮೇರೆಗೆ ವಿಚಾರಣೆಯನ್ನು ಪ್ರಾರಂಭಿಸುವ ಮುನ್ನ ಬಾಧಿತ ಮಹಿಳೆಯ ಕೋರಿಕೆಯಂತೆ ಅವಳ ಮತ್ತು ಪ್ರತ್ಯರ್ಜಿದಾರನ ನಡುವೆ ರಾಜಿ ಸಂಧಾನದ ಮೂಲಕ ವಿಷಯವನ್ನು ಇತ್ಯರ್ಥಪಡಿಸಲು ಕ್ರಮಗಳನ್ನು ಕೈಗೊಳ್ಳಬಹುದು. ಪರಂತು, ರಾಜಿ ಸಂಧಾನದ ಆಧಾರದ ಮೇಲೆ ಹಣಕಾಸಿನ ವಿಚಾರದ ಬಗ್ಗೆ ಇತ್ಯರ್ಥವನ್ನು ಮಾಡತಕ್ಕದ್ದಲ್ಲ.

**<u>ದೂರುಗಳ ಸಮಿತಿಗೆ ಸೌಲಭ್ಯಗಳನ್ನು ಒದಗಿಸುವುದು:</u>**

ಸ್ಥಳೀಯ ದೂರು ಸಮಿತಿಯು ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಪೀಠೋಪಕರಣಗಳನ್ನೊಳಗೊಂಡ ಒಂದು ಕೊಠಡಿಯನ್ನು ಒದಗಿಸುವುದು, ದೂರುಗಳ ಸಮಿತಿಯ ಕೆಲಸ ನಿರ್ವಹಿಸಲು ಜಿಲ್ಲಾಧಿಕಾರಿಗಳ ಕಛೇರಿಯಿಂದ ಒಬ್ಬ ಮಹಿಳಾ ಸಿಬ್ಬಂದಿಯನ್ನು ನೇಮಿಸುವುದು, ದೂರುಗಳನ್ನು ಪಡೆದುಕೊಳ್ಳಲು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸೂಕ್ತ ಸ್ಥಳದಲ್ಲಿ ಇರಲು ಬೀಗವನ್ನೊಳಗೊಂಡ ಒಂದು ದೂರು ಪೆಟ್ಟಿಗೆಯನ್ನು ಒದಗಿಸುವುದು. ದೂರುಗಳ ಸಮಿತಿಯ ಸಭೆ ಪ್ರತಿ ತಿಂಗಳು 5ನೇ ತಾರೀಖಿನಂದು ನಡೆಯತಕ್ಕದ್ದು. ಅವಶ್ಯಕತೆಯಿದ್ದಲ್ಲಿ, ತಿಂಗಳಲ್ಲಿ ಒಂದಕ್ಕಿಂತ ಹೆಚ್ಚು ಸಭೆ ನಡೆಸಬಹುದು. ಒಂದು ವೇಳೆ 5ನೇ ತಾರೀಖು ಭಾನುವಾರ ಅಥವಾ ರಜಾ ದಿನ ಬಂದಲ್ಲಿ, ಸಭೆಯನ್ನು ಮುಂದಿನ ಕೆಲಸದ ದಿನದಂದು ನಡೆಸುವುದು.

ಜಿಲ್ಲೆಗಳಲ್ಲಿ ವಿವಿಧ ಇಲಾಖೆಗಳಲ್ಲಿ ಮತ್ತು ಸಾರ್ವಜನಿಕ ಉದ್ಯಮಗಳಲ್ಲಿ, ಖಾಸಗಿ ಸಂಸ್ಥೆಗಳು/ಫ್ಯಾಕ್ಟರಿಗಳು/ಐ.ಟಿ.ಬಿ.ಟಿ. ಸಂಸ್ಥೆಗಳು, ಆಂತರಿಕ ದೂರುಗಳ ಸಮಿತಿ ರಚಿಸುವಂತೆ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸೂಕ್ತ ನಿರ್ದೇಶನ ಹೊರಡಿಸತಕ್ಕದ್ದು ಹಾಗೂ ಆಂತರಿಕ ದೂರು ಸಮಿತಿಗಳ ರಚನೆ ಕುರಿತು ನಿಗಾವಹಿಸತಕ್ಕದ್ದು. ಆಂತರಿಕ ಹಾಗೂ ಸ್ಥಳೀಯ ದೂರು ಸಮಿತಿ ರಚಿಸಲಾದ ಮಾಹಿತಿಯನ್ನು ದಿನಾಂಕ:3.12.2015ರೊಳಗಾಗಿ ಒಂದು ಅರೆ ಸರ್ಕಾರಿ ಪತ್ರವನ್ನು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಸದಸ್ಯ ಕಾರ್ಯದರ್ಶಿಯವರಿಗೆ ಬರೆಯತಕ್ಕದ್ದು.

(ಜಯಲಕ್ಷ್ಮಿ) 18/11/15
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಮಮಇ 33 ರಾಮಕ 2018

ಕರ್ನಾಟಕ ಸರ್ಕಾರ ಸಚಿವಾಲಯ,
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು. ದಿನಾಂಕ:26.06.2018

## ತಿದ್ದುಪಡಿ ಆದೇಶ

ಸರ್ಕಾರದ ಆದೇಶ ಸಂಖ್ಯೆ:ಮಮಇ 28 ರಾಮಕ 2015, ದಿ:18.11.2015ರ ಆದೇಶಕ್ಕೆ ಹೊರಡಿಸಿರುವ ಅನುಬಂಧದ **ಆಂತರಿಕ ದೂರು ಸಮಿತಿಯ ಸ್ವರೂಪ ಮತ್ತು ಅದಕ್ಕೆ ಇರುವ ಅಧಿಕಾರಗಳು** ಈ ಕಂಡಿಕೆಯಲ್ಲಿ ನಮೂದಿಸಿರುವ "ಕೆಲಸದ ಸ್ಥಳಗಳಲ್ಲಿ 10 ಅಥವಾ 10ಕ್ಕಿಂತ ಹೆಚ್ಚು ಮಹಿಳೆಯರು ಕೆಲಸ ಮಾಡುತ್ತಿದ್ದರೆ" ಎಂಬುದರ ಬದಲಾಗಿ "ಕೆಲಸದ ಸ್ಥಳಗಳಲ್ಲಿ 10 ಅಥವಾ 10ಕ್ಕಿಂತ ಹೆಚ್ಚು ಸಿಬ್ಬಂದಿಗಳು ಕೆಲಸ ಮಾಡುತ್ತಿದ್ದರೆ" ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ& ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ",ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
5. ಎಲ್ಲಾ ಇಲಾಖಾ ಮುಖ್ಯಸ್ಥರು
6. ಎಲ್ಲಾ ನಿಗಮ, ಮಂಡಳಿಗಳ ವ್ಯವಸ್ಥಾಪಕ ನಿರ್ದೇಶಕರು
7. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
8. ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರೀಕ್ಷಕರು, ಬೆಂಗಳೂರು
9. ಪೊಲೀಸ್ ಆಯುಕ್ತರು, ಬೆಂಗಳೂರು
10. ಎಲ್ಲಾ ಜಿಲ್ಲಾ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ

(6–10: ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗರವರಿಂದ ಕಳುಹಿಸುವುದು.)

11. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
12. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಕಾವೇರಿ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು
14. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನಸೌಧ, ಬೆಂಗಳೂರು.
17. ಸರ್ಕಾರದ ಉಪ ಕಾರ್ಯದರ್ಶಿರವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು

..2

18. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಶಾಖಾ ರಕ್ಷಾ ಕಡತ/ಓ.ಡಿ.ಜಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.

ಅನುಬಂಧ - 4

**ಉಮಾ ಮಹಾದೇವನ್**, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಫ್ಯಾಕ್ಸ್ ಸಂಖ್ಯೆ : 080-22251011
ಕಛೇರಿ ದೂರವಾಣಿ : 080-22353991
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು -560 001
ಇ-ಮೇಲ್ : prlsecy-wc@karnataka.gov.in

ಅ.ಸ.ಪ.ಸಂ:ಮಮಇ/SHW/2021 /143/2

ದಿನಾಂಕ:01-01-2022

ಮಾನ್ಯರೇ,

ವಿಷಯ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಆಂತರಿಕ ದೂರು ಸಮಿತಿ ರಚನೆಯಾಗಿರುವ ಕುರಿತು ಮಾಹಿತಿಯನ್ನು ಒದಗಿಸುವ ಬಗ್ಗೆ.

ಉಲ್ಲೇಖ: 1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ.
2. ಸರ್ಕಾರಿ ಆದೇಶ ಸಂಖ್ಯೆ:ಮಮಇ/28/ರಾಮಆ/2015 ಬೆಂಗಳೂರು, ದಿ:18.11.2015.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು Sexual Harassment of Women at Workplace (Prevention, Prohibition and Redressal) Act 2013 ರ ಅಧಿನಿಯಮಕ್ಕೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ:ಮಮಇ/ರಾಮಆ/2015 ಬೆಂಗಳೂರು, ದಿನಾಂಕ:18.11.2015 ರನ್ವಯ 10 ಮತ್ತು 10ಕ್ಕಿಂತ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ/ಖಾಸಗಿ ಕಛೇರಿಗಳು, ಕಾರ್ಖಾನೆಗಳು/ಗಾರ್ಮೆಂಟ್ಸ್ ಫ್ಯಾಕ್ಟರಿಗಳು, ವಿಶ್ವವಿದ್ಯಾಲಯಗಳು, ಸಂಘ-ಸಂಸ್ಥೆಗಳು ಇತ್ಯಾದಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ತಮ್ಮ ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿ ಮಟ್ಟದಲ್ಲಿ ಬರುವ ಸರ್ಕಾರಿ/ಖಾಸಗಿ ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಆಂತರಿಕ ದೂರು ಸಮಿತಿಯನ್ನು ರಚಿಸಬೇಕಾಗಿರುತ್ತದೆ. ರಚನೆಯಾಗಿದ್ದಲ್ಲಿ, ಆಂತರಿಕ ದೂರು ಸಮಿತಿಯು ರಚನೆಯಾದ ಅಧ್ಯಕ್ಷರ ಹೆಸರು, ಪದನಾಮ ಮತ್ತು ಈ ಬಗ್ಗೆ ವಿಚಾರಿಸಲು ಸಂಬಂಧಪಟ್ಟ ಅಧಿಕಾರಿಯ ದೂರವಾಣಿ ಸಂಖ್ಯೆಯೊಂದಿಗೆ ಫಲಕವನ್ನು ಸ್ಥಳೀಯ ದೂರು ಸಮಿತಿಯ ಕಛೇರಿಯಲ್ಲಿ ಅಳವಡಿಸಿದ್ದಲ್ಲಿ, ನೊಂದ ಮಹಿಳೆಯರು ಸುಲಭವಾಗಿ ಸಂಪರ್ಕಿಸಬಹುದಾಗಿದೆ.

ಉಲ್ಲೇಖ(1)ರ ಅಧಿನಿಯಮದ ಕಲಂ 5ರಲ್ಲಿ ತಿಳಿಸಿರುವಂತೆ ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕಾಗಿರುತ್ತದೆ. ಅದ್ದರಿಂದ ಈಗಾಗಲೇ ರಚಿಸಲಾಗಿರುವ ಆಂತರಿಕ/ಸ್ಥಳೀಯ ದೂರು ಸಮಿತಿಯ ಕಾಲಾವಧಿಯ ಬಗ್ಗೆ ಮರು ಪರಿಶೀಲಿಸಿ, ಸದರಿ ಸಮಿತಿಯನ್ನು ಪುನರ್ ರಚಿಸಬೇಕಾಗಿದ್ದಲ್ಲಿ ಕ್ರಮ ಕೈಗೊಳ್ಳಲು ಕೋರಿದೆ. ಆಂತರಿಕ/ಸ್ಥಳೀಯ ದೂರು ಸಮಿತಿಯಲ್ಲಿ ಹಿರಿಯ ಮಹಿಳಾ ಅಧಿಕಾರಿಯನ್ನು ಅಧ್ಯಕ್ಷರನ್ನಾಗಿ ನೇಮಿಸಿ, ಸಮಿತಿಯ ಸದಸ್ಯರುಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗಗಳಿಗೆ ಸೇರಿದ ಸದಸ್ಯರು ಹಾಗೂ ಕಡ್ಡಾಯವಾಗಿ ಎನ್.ಜಿ.ಓ. ಪ್ರತಿನಿಧಿಯನ್ನು ನೇಮಿಸಿಕೊಳ್ಳಲು ಸೂಚಿಸಿದೆ. ತಮ್ಮ ವ್ಯಾಪ್ತಿಗೆ ಒಳಪಡುವ ಸರ್ಕಾರಿ/ಖಾಸಗಿ ಸಂಸ್ಥೆಗಳ ವಾರ್ಷಿಕ ವರದಿಯಲ್ಲಿ ಆಂತರಿಕ ದೂರು ಸಮಿತಿಯ ವರದಿಯನ್ನು ಪ್ರಕಟಿಸಲು ಕೋರಿದೆ.

ಆದರಗಳೊಂದಿಗೆ,

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)

ಶ್ರೀಮತಿ ವಿ.ವಿ. ಜ್ಯೋತ್ಸ್ನಾ, ಭಾ.ಆ.ಸೇ.,
ಜಿಲ್ಲಾಧಿಕಾರಿಗಳು,
ಜಿಲ್ಲಾಧಿಕಾರಿಗಳವರ ಕಛೇರಿ,
ಕಲಬುರಗಿ ಜಿಲ್ಲೆ.

/1/2022

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಫ್ಯಾಕ್ಸ್ ಸಂಖ್ಯೆ : 080-22251011
ಕಛೇರಿ ದೂರವಾಣಿ : 080-22353991
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು -560 001
ಇ-ಮೇಲ್ : prlsecy-wc@karnataka.gov.in

ಅ.ಸ.ಪ.ಸಂ:ಮಮಇ/SHW/2021 /1143/2

ದಿನಾಂಕ:01-01-2022

ಮಾನ್ಯರೇ,

ವಿಷಯ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಆಂತರಿಕ ದೂರು ಸಮಿತಿ ರಚನೆಯಾಗಿರುವ ಕುರಿತು ಮಾಹಿತಿಯನ್ನು ಒದಗಿಸುವ ಬಗ್ಗೆ.

ಉಲ್ಲೇಖ:
1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ
2. ಸರ್ಕಾರಿ ಆದೇಶ ಸಂಖ್ಯೆ:ಮಮಇ/28/ರಾಮಆ/2015 ಬೆಂಗಳೂರು, ದಿನಾಂಕ:18.11.2015.

.....

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು Sexual Harassment of Women at Workplace (Prevention, Prohibition and Redressal) Act 2013 ರ ಅಧಿನಿಯಮಕ್ಕೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ:ಮಮಇ/ರಾಮಆ/2015 ಬೆಂಗಳೂರು, ದಿನಾಂಕ:18.11.2015 ರನ್ವಯ 10 ಮತ್ತು 10ಕ್ಕಿಂತ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ/ಖಾಸಗಿ ಕಛೇರಿಗಳು, ಗಾರ್ಮೆಂಟ್ಸ್/ಕಾರ್ಖಾನೆಗಳು ವಿಶ್ವವಿದ್ಯಾಲಯಗಳು, ಸಂಘ-ಸಂಸ್ಥೆಗಳು ಇತ್ಯಾದಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ತಮ್ಮ ಅಧೀನ ಕಛೇರಿಗಳಾದ ತಾಲ್ಲೂಕು ಪಂಚಾಯತಿ, ಪಂಚಾಯತ್ ಇಂಜಿನಿಯರಿಂಗ್ ವಿಭಾಗ, ಗ್ರಾಮ ಪಂಚಾಯತ್ ಹಾಗೂ ಇತರೆ ಸರ್ಕಾರಿ ಕಛೇರಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸಬೇಕಾಗಿರುತ್ತದೆ. ಈಗಾಗಲೇ ರಚನೆಯಾಗಿದ್ದಲ್ಲಿ, ದೂರು ಸಮಿತಿಯು ಅಧ್ಯಕ್ಷರ ಹೆಸರು, ಪದನಾಮ ಮತ್ತು ಈ ಬಗ್ಗೆ ವಿಚಾರಿಸಲು ಸಂಬಂಧಪಟ್ಟ ಅಧಿಕಾರಿಯ ದೂರವಾಣಿ ಸಂಖ್ಯೆಯೊಂದಿಗೆ ಫಲಕವನ್ನು ಸ್ಥಳೀಯ ದೂರು ಸಮಿತಿಯ ಕಛೇರಿಯಲ್ಲಿ ಅಳವಡಿಸಿದ್ದಲ್ಲಿ, ನೊಂದ ಮಹಿಳೆಯರು ಸುಲಭವಾಗಿ ಸಂಪರ್ಕಿಸಬಹುದಾಗಿದೆ.

ಉಲ್ಲೇಖ(1)ರ ಅಧಿನಿಯಮದ ಕಲಂ 5ರಲ್ಲಿ ತಿಳಿಸಿರುವಂತೆ ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕಾಗಿರುತ್ತದೆ. ಅದ್ದರಿಂದ ಈಗಾಗಲೇ ರಚಿಸಲಾಗಿರುವ ಆಂತರಿಕ/ಸ್ಥಳೀಯ ದೂರು ಸಮಿತಿಯ ಕಾಲಾವಧಿಯ ಬಗ್ಗೆ ಮರು ಪರಿಶೀಲಿಸಿ, ಸದರಿ ಸಮಿತಿಯನ್ನು ಪುನರ್ ರಚಿಸಬೇಕಾಗಿದ್ದಲ್ಲಿ ಕ್ರಮ ಕೈಗೊಳ್ಳಲು ಕೋರಿದೆ. ಆಂತರಿಕ ದೂರು ಸಮಿತಿಯಲ್ಲಿ ಹಿರಿಯ ಮಹಿಳಾ ಅಧಿಕಾರಿಯನ್ನು ಅಧ್ಯಕ್ಷರನ್ನಾಗಿ ನೇಮಿಸಿ, ಸಮಿತಿಯ ಸದಸ್ಯರುಗಳಲ್ಲಿ ಕಡ್ಡಾಯವಾಗಿ ಎನ್.ಜಿ.ಓ. ಪ್ರತಿನಿಧಿಯನ್ನು ನೇಮಿಸಿಕೊಳ್ಳಬೇಕಾಗಿರುತ್ತದೆ. ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಖಾಸಗಿ ಸಂಸ್ಥೆಗಳ ವಾರ್ಷಿಕ ವರದಿಯಲ್ಲಿ ದೂರು ಸಮಿತಿಯ ಮಾಹಿತಿಯನ್ನು ಪ್ರಕಟಿಸಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)

ಶ್ರೀಮತಿ ದಿವ್ಯಾಪ್ರಭು ಜಿ.ಆರ್.ಜೆ., ಭಾ.ಆ.ಸೇ.,
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್,
ಮಂಡ್ಯ ಜಿಲ್ಲೆ.

ಸ್ವೀಕೃತಿ 4/1/2022
ದಿನಾಂಕ

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಫ್ಯಾಕ್ಸ್ ಸಂಖ್ಯೆ : 080-22251011
ಕಛೇರಿ ದೂರವಾಣಿ : 080-22353991
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು -560 001
ಇ-ಮೇಲ್ : prlsecy-wc@karnataka.gov.in

ಅ.ಸ.ಪ.ಸಂ:ಮಮಇ/SHW/2021 1143/2

ದಿನಾಂಕ:01-01-2022

ಮಾನ್ಯರೇ,

ವಿಷಯ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಆಂತರಿಕ ದೂರು ಸಮಿತಿ ರಚನೆಯಾಗಿರುವ ಕುರಿತು ಮಾಹಿತಿಯನ್ನು ಒದಗಿಸುವ ಬಗ್ಗೆ.

ಉಲ್ಲೇಖ:
1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ
2. ಸರ್ಕಾರಿ ಆದೇಶ ಸಂಖ್ಯೆ:ಮಮಇ/28/ರಾಮಆ/2015 ಬೆಂಗಳೂರು, ದಿನಾಂಕ:18.11.2015.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ ( Sexual Harassment of Women at Workplace (Prevention, Prohibition and Redressal) Act 2013 ರ ಅಧಿನಿಯಮಕ್ಕೆ ಸಂಬಂಧಿಸಿದಂತೆ, ಉಲ್ಲೇಖ(2)ರಂತೆ ಸರ್ಕಾರದ ಆದೇಶ ಹೊರಡಿಸಲಾಗಿದೆ. ಸದರಿ ಆದೇಶದಂತೆ 10 ಮತ್ತು 10ಕ್ಕಿಂತ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ/ಖಾಸಗಿ ಕಛೇರಿಗಳು, ಕಾರ್ಖಾನೆಗಳು/ಗಾರ್ಮೆಂಟ್ಸ್ ಫ್ಯಾಕ್ಟರಿಗಳು, ವಿಶ್ವವಿದ್ಯಾಲಯಗಳು, ಸಂಘ-ಸಂಸ್ಥೆಗಳು ಇತ್ಯಾದಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ಆದ್ದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಒಳಪಡುವ ತಮ್ಮ ಅಧೀನ ಕಛೇರಿಗಳಲ್ಲಿ ಹಾಗೂ ಖಾಸಗಿ ಕಛೇರಿ/ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವಂತೆ ನಿರ್ದೇಶಿಸಲು ಕೋರಿದೆ. ಆಂತರಿಕ ದೂರು ಸಮಿತಿಯು ರಚನೆಯಾದ ಕಛೇರಿಗಳಲ್ಲಿ ನೊಂದ ಮಹಿಳೆಯರಿಗೆ ಅನುಕೂಲವಾಗುವಂತೆ ಅಧ್ಯಕ್ಷರ ಹೆಸರು, ಪದನಾಮ ಹಾಗೂ ಈ ಬಗ್ಗೆ ವಿಚಾರಿಸಲು ಸಂಬಂಧಪಟ್ಟ ಅಧಿಕಾರಿಯ ದೂರವಾಣಿ ಸಂಖ್ಯೆಯೊಂದಿಗೆ ಫಲಕಗಳನ್ನು ಅಳವಡಿಸಿದ್ದಲ್ಲಿ, ನೊಂದ ಮಹಿಳೆಯರು ಸುಲಭವಾಗಿ ಸಂಪರ್ಕಿಸಬಹುದಾಗಿದೆ.

ಉಲ್ಲೇಖ(1)ರ ಅಧಿನಿಯಮದ ಕಲಂ 5ರಲ್ಲಿ ತಿಳಿಸಿರುವಂತೆ ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕಾಗಿರುತ್ತದೆ. ಆದ್ದರಿಂದ ಈಗಾಗಲೇ ರಚಿಸಲಾಗಿರುವ ಆಂತರಿಕ ದೂರು ಸಮಿತಿಯ ಕಾಲಾವಧಿಯ ಬಗ್ಗೆ ಮರು ಪರಿಶೀಲಿಸಿ, ಸದರಿ ಸಮಿತಿಯನ್ನು ಪುನರ್ ರಚಿಸಬೇಕಾಗಿದ್ದಲ್ಲಿ ಕ್ರಮ ಕೈಗೊಳ್ಳಲು ಕೋರಿದೆ. ಆಂತರಿಕ ದೂರು ಸಮಿತಿಯಲ್ಲಿ ಹಿರಿಯ ಮಹಿಳಾ ಅಧಿಕಾರಿಯನ್ನು ಅಧ್ಯಕ್ಷರನ್ನಾಗಿ ನೇಮಿಸಿ, ಸಮಿತಿಯ ಸದಸ್ಯರುಗಳಲ್ಲಿ ಕಡ್ಡಾಯವಾಗಿ ಎನ್.ಜಿ.ಓ. ಪ್ರತಿನಿಧಿಯನ್ನು ನೇಮಿಸಿಕೊಳ್ಳಬೇಕಾಗಿರುತ್ತದೆ. ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಖಾಸಗಿ ಸಂಸ್ಥೆಗಳ ವಾರ್ಷಿಕ ವರದಿಯಲ್ಲಿ ದೂರು ಸಮಿತಿಯ ಮಾಹಿತಿಯನ್ನು ಪ್ರಕಟಿಸಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)

ಶ್ರೀ ಗೌರವ್ ಗುಪ್ತಾ, ಭಾ.ಆ.ಸೇ.,
ಆಯುಕ್ತರು,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ಎನ್.ಆರ್.ವೃತ್ತ, ಬೆಂಗಳೂರು.

ರ.ವ್ಯಾ.ಪ.ಸ.ಅ
ದಿನಾಂಕ 4/1/2022

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಫ್ಯಾಕ್ಸ್ ಸಂಖ್ಯೆ : 080-222510
ಕಛೇರಿ ದೂರವಾಣಿ : 080-22353991
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು -560 001
ಇ-ಮೇಲ್ : prlsecy-wc@karnataka.gov.in

ಅ.ಸ.ಪ.ಸಂ:ಮಮಇ/SHW/2021 /143/2

ದಿನಾಂಕ:01-01-2022

ಮಾನ್ಯರೇ,

ವಿಷಯ: ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ಆಂತರಿಕ ದೂರು ಸಮಿತಿ ರಚನೆಯಾಗಿರುವ ಕುರಿತು ಮಾಹಿತಿಯನ್ನು ಒದಗಿಸುವ ಬಗ್ಗೆ.

ಉಲ್ಲೇಖ:
1. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ
2. ಸರ್ಕಾರಿ ಆದೇಶ ಸಂಖ್ಯೆ:ಮಮಇ/28/ರಾಮಆ/2015 ಬೆಂಗಳೂರು, ದಿನಾಂಕ:18.11.2015.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013 ಅಧಿನಿಯಮ (Sexual Harassment of Women at Workplace (Prevention, Prohibition and Redressal) Act 2013 ರ ಅಧಿನಿಯಮಕ್ಕೆ ಸಂಬಂಧಿಸಿದಂತೆ, ಉಲ್ಲೇಖ(2)ರಂತೆ ಸರ್ಕಾರದ ಆದೇಶ ಹೊರಡಿಸಲಾಗಿದೆ. ಸದರಿ ಆದೇಶದಂತೆ 10 ಮತ್ತು 10ಕ್ಕಿಂತ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ/ಖಾಸಗಿ ಕಛೇರಿಗಳು, ಕಾರ್ಖಾನೆಗಳು/ಗಾರ್ಮೆಂಟ್ಸ್ ಫ್ಯಾಕ್ಟರಿಗಳು, ವಿಶ್ವವಿದ್ಯಾಲಯಗಳು, ಸಂಘ-ಸಂಸ್ಥೆಗಳು ಇತ್ಯಾದಿಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸುವುದು ಕಡ್ಡಾಯವಾಗಿರುತ್ತದೆ. ಆದರೆ ಇದುವರೆವಿಗೂ ಖಾಸಗಿ ಕಾರ್ಖಾನೆಗಳು/ಸಂಸ್ಥೆಗಳಲ್ಲಿ 1043 ಆಂತರಿಕ ದೂರು ಸಮಿತಿಯು ರಚನೆಯಾಗಿರುವ ಬಗ್ಗೆ ವರದಿಯಾಗಿರುತ್ತದೆ. ಆದ್ದರಿಂದ ತಮ್ಮ ಇಲಾಖಾ ವ್ಯಾಪ್ತಿಗೆ ಒಳಪಡುವ ಖಾಸಗಿ ಕಾರ್ಖಾನೆಗಳು/ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಯನ್ನು ರಚಿಸಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗಕ್ಕೆ ವರದಿ ಕಳುಹಿಸಲು ನಿರ್ದೇಶಿಸಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)

ಡಾ|| ಜೆ.ಕಲ್ಪನಾ, ಭಾ.ಆ.ಸೇ.,
ಅಪರ ಮುಖ್ಯ ಕಾರ್ಯದರ್ಶಿಗಳು,
ಕಾರ್ಮಿಕ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.